ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
EMAIL : dairyadadaari@gmail.com ಸಂಪುಟ: 01 ಸಂಚಿಕೆ: 110
ಬೆಲೆ ರೂ : 2.00
ರಾಯಚೂರು
ಪುಟ: 4
DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಸೋಮವಾರ: 06-04-2026

# ಸಮಾನತೆ ಇಲ್ಲದ ಸ್ವಾತಂತ್ರ್ಯ ಅಪೂರ್ಣ: ಜಿಲ್ಲಾಧಿಕಾರಿ ನಿತೀಶ್ ಕೆ.

## ಜಿಲ್ಲಾಡಳಿತದಿಂದ ಡಾ.ಬಾಬು ಜಗಜೀವನ ರಾಮ್ 119ನೇ ಜನ್ಮದಿನೋತ್ಸವ








ಧೈರ್ಯದ ದಾರಿ

**ರಾಯಚೂರು:** ಸಮಾನತೆ ಇಲ್ಲದ ಸ್ವಾತಂತ್ರ್ಯ ಅಪೂರ್ಣ ಎಂದು ಡಾ. ಬಾಬು ಜಗಜೀವನ ರಾಮ್ ಅವರು ಅಂದೇ ಹೇಳಿದ್ದರು ಹಾಗಾಗಿ ಸಮಾಜದಲ್ಲಿ ಜಾತಿ ಬೇಧ ಮರೆತು ಸಮಾನತೆಗಾಗಿ ಎಲ್ಲರೂ ಶ್ರಮಿಸಬೇಕೆಂದು ಜಿಲ್ಲಾಧಿಕಾರಿ ಕೆ. ನಿತೀಶ್ ಅವರು ಹೇಳಿದರು.

ಏಪ್ರಿಲ್ 05ರ ಭಾನುವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರ ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಭಾರತ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ 119ನೇ ಜನ್ಮ ದಿನಾಚರಣೆ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಅವರು ಬಿಹಾರ ರಾಜ್ಯದಲ್ಲಿ ಜನಿಸಿದಾಗ ಅಂದಿನ ಜಾತಿ ವ್ಯವಸ್ಥೆಯ ತಾರತಮ್ಯ ಅವರ ಬಾಲ್ಯದ ದಿನಗಳಲ್ಲಿ ಹಲವಾರು ಕಹಿ ಘಟಕಗಳೆಗಳು ಜರುಗಿದವು. ಅವರು ಎದೆ ಗುಂದದೆ ಹೋರಾಡಿ ಇತಿಹಾಸ ನಿರ್ಮಿಸಿ ಶಿಕ್ಷಣವೇ ಮನಗೆ ಶಕ್ತಿ ಎಂದು ಎಲ್ಲಾ ಶೋಷಿತ ಜನರಿಗೆ ಹೇಳಿದರು. ದೇಶದ ಸ್ವಾತಂತ್ರ್ಯ ಸಮಯದಲ್ಲಿ ಗಾಂಧೀಜಿಯವರ ಪ್ರೇರಣೆಯಿಂದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ತೊಡಗಿದ್ದರು. ಸಂವಿಧಾನ ರಚನಾ ಸಮಿತಿ ಸದಸ್ಯರಾಗಿ ಶೋಷಿತ ಜನರಿಗೆ ಹಕ್ಕು ನೀಡುವಲ್ಲಿ ಬಹುಮುಖ್ಯ ಪಾತ್ರವಹಿಸಿದ್ದರು. ನನ್ನ ಹೋರಾಟ ಆಂಗ್ಲರ ವಿರುದ್ಧ ಅಲ್ಲ ಅಸಮಾನತೆ ವಿರುದ್ಧ ಎಂದು ಅವರು ಹೇಳಿದರು. ನಮ್ಮ ದೇಶದ ಸಂವಿಧಾನ ರಚನೆಯಾದ ನಂತರ ಕೇಂದ್ರ ಸರಕಾರದಲ್ಲಿ ವಿವಿಧ ಇಲಾಖೆಗಳ ಸಚಿವರಾಗಿದ್ದರು. ಕಾರ್ಮಿಕ ಸಚಿವರಾಗಿ ಕಾರ್ಮಿಕರು ಘನತೆ ಜೀವನ ನಡೆಸಲು ಹಲವಾರು ಕಾನೂನುಗಳನ್ನು ಜಾರಿಗೆ ತಂದರು. ರಕ್ಷಣಾ ಸಚಿವರಾಗಿ ಇಂಡೋ–ಪಾಕಿಸ್ತಾನ ಯುದ್ಧದಲ್ಲಿ ಪ್ರಮುಖ ಪಾತ್ರವಹಿಸಿ ದೇಶದ ಸೈನಿಕರಿಗೆ ಧೈರ್ಯ ತುಂಬಿ ದೇಶಕ್ಕೆ ವಿಜಯ ತಂದರು. ಕೃಷಿ ಸಚಿವರಾಗಿ ದೇಶದಲ್ಲಿ ಹಸಿರು ಕ್ರಾಂತಿಯನ್ನೆ ಮಾಡಿದರು. ನಾವು ಇಂದು ನಿಶ್ಚಿಂತೆಯಿಂದ ಊಟ ಮಾಡುತ್ತಿದ್ದೆವೆ ಎಂದರೆ ಇದಕ್ಕೆ ಅವರೆ ಕಾರಣ ಎಂದು ಹೇಳಿದರು. 2ನೇಪುಟಕ್ಕೆ

# ವೀರಯೋಧ ಮಲ್ಲಯ್ಯನಾಯಕ ಪೆದರಡ್ಡಿಯವರನ್ನು ಭವ್ಯವಾಗಿ ಸ್ವಾಗತಿಸಿದ ಶಾಸಕ ಹಂಪಯ್ಯನಾಯಕ

## 22 ವರ್ಷ ಗಡಿಯಲ್ಲಿ ದೇಶ ಕಾದ ಯೋಧನಿಗೆ ಅದ್ದೂರಿ ಸ್ವಾಗತ

ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ದೇವಿಪುರ ಗ್ರಾಮದ ಶ್ರೀ ದ್ಯಾವಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ಭಾರತೀಯ ಸೇನೆಯ ಗಡಿ ಭದ್ರತಾಪಡೆಯಲ್ಲಿ 22 ವರ್ಷಗಳ ಸುಧೀರ್ಘವಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿ ಸ್ವ ಗ್ರಾಮಕ್ಕೆ ಆಗಮಿಸಿದ ವೀರ ಯೋಧ ಮಲ್ಲಯ್ಯನಾಯಕ ಪೆದರಡ್ಡಿ ರವರನ್ನು ಗ್ರಾಮಸ್ಥರು ಹಾಗೂ ಶಾಸಕ ಹಂಪಯ್ಯನಾಯಕ, ಸಂಸದ ಜಿ.ಕುಮಾರನಾಯಕ ಅತ್ಮಿಯವಾಗಿ ಬರಮಾಡಿಕೊಂಡು ಸ್ವಾಗತಿಸಿದರು.

ವೇದಿಕೆಯಲ್ಲಿ ನಿವೃತ್ತ ವೀರ ಯೋಧ ಮಲ್ಲಯ್ಯನಾಯಕ ಪೆದರಡ್ಡಿ ರವರನ್ನು ಸನ್ಮಾನಿಸಿ ಗೌರವಿಸಿ ಶಾಸಕ ಹಂಪಯ್ಯನಾಯಕ ಮಾತನಾಡಿ ದೇಶದ ಭದ್ರತೆ ಹಾಗೂ ದೇಶದಲ್ಲಿನ ನಾಗರಿಕರ ಸುರಕ್ಷತೆಗಾಗಿ ಶ್ರಮಿಸುವ ಯೋಧರಿಗೆ ಹಾಗೂ ಅನ್ನವನ್ನು ನೀಡುವ ರೈತರಿಗೆ, ಸಮಾಜವನ್ನು ರೂಪಿಸುವ ಶಿಕ್ಷಕರಿಗೆ ನಾವೆಲ್ಲ ಗೌರವಸಲ್ಲಿಸಬೇಕಾಗಿರುವುದು ನಮ್ಮ ಅದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಸಂಸದ ಜಿ.ಕುಮಾರನಾಯಕ ಮಾತನಾಡಿ ನಿವೃತ್ತ ಯೋಧರಿಗೆ ಸರ್ಕಾರದಿಂದ ದೊರೆಯುವ ನಿವೃತ್ತ ವೇತನ ,ಕೃಷಿ ಭೂಮಿ ಸೇರಿದಂತೆ ವಿವಿಧ ಸೌಲಭ್ಯಗಳ ಬಗ್ಗೆ ಸದನದಲ್ಲಿ ಮಾತನಾಡಿ ನಿವೃತ್ತ ಯೋಧರಿಗೆ ಸಕಾಲದಲ್ಲಿ ಯೋಜನೆಗಳ ಲಾಭ ದೊರೆಯುವಂತೆ ಒತ್ತಾಯಿಸುತ್ತೇನೆ ದೇಶದ ಭದ್ರತೆಗಾಗಿ ತಮ್ಮ ಜೀವನವನ್ನು ಮುಡುಪಿಡುವ ಯೋಧರು ನಿವೃತ್ತರಾಗಿ ತಮ್ಮ ಗ್ರಾಮಗಳಿಗೆ ಬಂದಾಗ ಅವರನ್ನು ತಾಲೂಕು ಆಡಳಿತದಿಂದ ಗೌರವಿಸುವ ಮೂಲಕ ಯುವಕರಲ್ಲಿ ದೇಶಪ್ರೇಮವನ್ನು ಮೂಡಿಸುವ ಕಾರ್ಯವಾಗಬೇಕಾಗಿದೆ ಈ ವಿಷಯದ ಬಗ್ಗೆ ಕೂಡ ಸರಕಾರದ ಗಮನ ಸೇಳೆಯುತ್ತೇನೆ ಎಂದು ತಿಳಿಸಿದರು.



ಕಾರ್ಯಕ್ರಮದಲ್ಲಿ ಉಟಕನೂರು ಅಡವಿಸಿದ್ದೇಶ್ವರ ಸಂಸ್ಥಾನಮಠದ ಶ್ರೀ ಮರಿಬಸವಲಿಂಗ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು, ಸಿಂಧನೂರು ವೆಂಕಟಗಿರಿ ಕ್ಯಾಂಪಿನ ಶ್ರೀ ಸದಾನಂದಶರಣರು ಆರ್ಶೀವಾಚನ ನೀಡಿದರು.

ಈ ಕಾರ್ಯಕ್ರಮದಲ್ಲಿ ಮುಖಂಡರಾದ ಬಿ,ಮಾನಪ್ಪ ನಾಯಕ,ರಾಜಾ ಶ್ಯಾಮಸುಂದರ್ ನಾಯಕ ವಕೀಲರು, ರಾಗಲಪರ್ವಿ ತಿಮ್ಮಯ್ಯನಾಯಕ, ಡಾ.ಬಸವರಾಜಪ್ಪ ಪೋತ್ನಾಳ,ಹನುಮಂತಪ್ಪ ವಕೀಲರು ದೇವಿಪುರ, ಬಿ.ಸಿ.ಎಂ.ಅಧಿಕಾರಿ ಬಾಗಯ್ಯ ನಾಯಕ,

ಮಾಜಿ ಗ್ರಾಪಂ ಅಧ್ಯಕ್ಷರಾದ ಬಾಲಯ್ಯ ನಾಯಕ, ಅಂಬಣ್ಣ ನಾಯಕ, ಆಂಜನೇಯ ನಸ್ಲಾಪುರ, ರಾಯಚೂರು ಜಿಲ್ಲಾ ಮಾಜಿ ಯೋಧರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣಮೂರ್ತಿ ಕಲ್ಲೂರು, ಮಾಜಿ ಯೋಧರ ಕ್ಷೇಮಾಭಿವೃದ್ಧಿ ಸಂಘ ಮಾನ್ವಿ ಅಧ್ಯಕ್ಷರಾದ ಬಸವರಾಜ ನಾಯಕ ಮುಷ್ಟೂರು. ನಿವೃತ್ತ ಯೋಧ ಆಂಜನೇಯ ನಾಯಕ ನೀರಮಾನ್ವಿ, ಸೇರಿದಂತೆ ತಾಲೂಕಿನ ನಿವೃತ್ತ ಮಾಜಿ ಯೋಧರು, ಹಾಗೂ ಯೋಧನ ಕುಟುಂಬಸ್ಥರು ಮತ್ತು ಗ್ರಾಮಸ್ಥಾರು,ಭಾಗವಹಿಸಿದರು. ಸುಮಾರು 22 ವರ್ಷಗಳ ಕಾಲ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿದ್ದ ಸಂತೋಷ ಜಮ್ಮು–ಕಾಶ್ಮೀರ, ದೆಹಲಿ, ಪಂಜಾಬ್ ಸೇರಿದಂತೆ ಹಲವೆಡೆ ಕರ್ತವ್ಯ ನಿರ್ವಹಿಸಿದ್ದಾರೆ. ಹೀಗಾಗಿ, ಊರಿಗೆ ಮರಳಿ ಬಂದ ವೀರ ಯೋಧನನ್ನು ಗ್ರಾಮಸ್ಥರು 2ನೇಪುಟಕ್ಕೆ

# ಫೈನಾನ್ಸಿಯರ್ ಅನಿಲ ರಾಠೋಡ್ ಕೊಲೆ: ಶೂಟೌಟ್ ಮಾಡಿ ಹಂತಕನ ಬಂಧನ



**ಕಲಬುರಗಿ,ಏ.5–** ನಗರದ ಪಿ ಅಂಡ್ ಟಿ ಕಾಲೋನಿಯಲ್ಲಿ ಏ.2 ರಂದು ರಾತ್ರಿ ನಡೆದ ಫೈನಾನ್ಸಿಯರ್ ಅನಿಲ್ ರಾಠೋಡ್ ಕೊಲೆ ಪ್ರಕರಣದ ಆರೋಪಿ ಈಶ್ವರ ರಾಠೋಡ್ ಎಂಬಾತನ ಮೇಲೆ ಸ್ಟೇಷನ್ ಬಜಾರ್ ಪೊಲೀಸರು ಶೂಟೌಟ್ ಮಾಡಿ ಬಂಧಿಸಿದ್ದಾರೆ.ಹಣಕಾಸು ವಿಷಯಕ್ಕೆ ಫೈನಾನ್ಸಿಯರ್ ಅನಿಲ್ ರಾಠೋಡ್ ಎಂಬುವವರನ್ನು ಏ.2 ರಂದು ರಾತ್ರಿ ದುಷ್ಕರ್ಮಿಗಳು ಪಿ ಅಂಡ್ ಟಿ ಕಾಲೋನಿಯಲ್ಲಿರುವ ಫೈನಾನ್ಸನಲ್ಲಿಯೇ ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿ ಪರಾರಿಯಾಗಿದ್ದರು. ಕೊಲೆ ನಡೆದ ಎರಡು ದಿನಗಳಲ್ಲಿ ಪೊಲೀಸರು ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸಲು ಮುಂದಾದಾಗ ಆರೋಪಿ ಈಶ್ವರ ರಾಠೋಡ್ ಪೊಲೀಸರ ಮೇಲೆ ದಾಳಿ ನಡೆಸಿದ್ದು, ಆತ್ಮರಕ್ಷಣೆಗಾಗಿ ಪೊಲೀಸರು ಆರೋಪಿಯ ಎಡಗಾಲಿಗೆ ಗುಂಡು ಹೊಡೆದು ಬಂಧಿಸಿದ್ದಾರೆ.ಗುಂಡೇಟಿನಿಂದ ಗಾಯಗೊಂಡಿರುವ ಈಶ್ವರ ರಾಠೋಡನನ್ನು ನಗರದ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರು ಜಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ್ದಾರೆ.

**ನಾಲ್ವರ ಬಂಧನ**–ನಗರದ ಹಳೆಯ ಜೇವರಗಿ ರಸ್ತೆಯ ಪಿ ಅಂಡ್ ಟಿ ಕಾಲೋನಿಯಲ್ಲಿ ಗುರುವಾರ ರಾತ್ರಿ ನಡೆದ ಅನೀಲ ವಿಠ್ಠಲ ರಾಠೋಡ ( 45) ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರು ಆರೋಪಿಗಳನ್ನು ಸ್ಟೇಷನ್ ಬಜಾರ್ ಪೊಲೀಸರು ಬಂಧಿಸಿದ್ದಾರೆ.ಈಶ್ವರ ರಾಠೋಡ, ನಾರಾಯಣ ಪವಾರ, ವಿದ್ಯಾಸಾಗರ ಮತ್ತು ಶರಣು ಬಂಧಿತ ಆರೋಪಿಗಳಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಈಶ್ವರ ರಾಠೋಡ್‌ನನ್ನು ನಿನ್ನೆ ಶೂಟೌಟ್ ಮಾಡಿ ಬಂಧಿಸಲಾಗಿದ್ದು, ಉಳಿದ ಮೂವರು ಆರೋಪಿಗಳನ್ನು ಈ ಮೊದಲೇ ಬಂಧಿಸಲಾಗಿದೆ.

# ಪ್ರಸ್ತುತ ದಿನಮಾನಗಳಲ್ಲಿ ಪ್ರತಿಭೆ ಇದ್ದರೆ ಮಾತ್ರ ಯಶಸ್ಸು ಸಾಧ್ಯ ಡಾ. ಹೈಂದವಿ ಮಧುಸೂದನ್ ಗುಪ್ತಾಜೀ




ಧೈರ್ಯದ ದಾರಿ

**ಮಾನ್ವಿ :**ಪಟ್ಟಣದ ಶಾರದಾ ವಿದ್ಯಾನಿಕೇತನ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಹತ್ತನೇ ತರಗತಿ ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಶಾರದಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಡಾ. ಹೈಂದವಿ ಮಧುಸೂದನ್ ಗುಪ್ತಾಜೀ ಕಾರ್ಯಕ್ರಮವನ್ನು ಉದ್ಘಾಟಿಸಿ ಪ್ರಸ್ತುತ ದಿನಮಾನಗಳಲ್ಲಿ ಪ್ರತಿಭೆ ಇದ್ದರೆ ಮಾತ್ರ ಯಶಸ್ಸು ದೊರೆಯುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತುಗಳನ್ನು ಹೇಳುವುದರ ಜೊತೆಗೆ ಹತ್ತನೇ ತರಗತಿ ನಿಮ್ಮ ಯಶಸ್ಸಿನ ಮೊದಲನೇ ಹಂತ ಹೀಗಾಗಿ ಮುಂದಿನ ದಿನಗಳಲ್ಲಿ ನೀವು ಒಳ್ಳೆಯ ಫಲಿತಾಂಶವನ್ನು ಪಡೆಯುವ ಜೊತೆ ನಿಮ್ಮ ಜೀವನವನ್ನು ಯಶಸ್ವಿಗೊಳಿಸುವ ಹಾಗೂ ನಿಮಗೆ ಇಷ್ಟವಾದ ಕೋರ್ಸ್ ಆಯ್ಕೆ ಮಾಡಿಕೊಂಡು ನಿಮ್ಮ ಮತ್ತು ನಿಮ್ಮ ತಂದೆ ತಾಯಿಯ ಕನಸುಗಳನ್ನು ನನಸು ಮಾಡಿಕೊಂಡು ಜೀವನಕ್ಕೆ ಭದ್ರಬುನಾದಿಯನ್ನು ಹಾಕಿಕೊಳ್ಳಿ ಎಂದು ತಿಳಿಸಿದರು.

ಶಾರದಾ ಟ್ಯಾಲೆಂಟ್ ಸರ್ಚ್ ಪರೀಕ್ಷೆಯಲ್ಲಿ 245 ವಿದ್ಯಾರ್ಥಿಗಳು ಭಾಗವಹಿಸಿದ್ದರು ಈ ವಿದ್ಯಾರ್ಥಿಗಳಲ್ಲಿ ಪ್ರಥಮ ಬಹುಮಾನ 5000 ರೂ ಗಳನ್ನು ಸುಖದೇವ್ ತಂದೆ ಪರಶುರಾಮ್ ಕಟ್ಟಿಮನಿ ದ್ವಿತೀಯ ಬಹುಮಾನ 3000 ರೂ ಗಳನ್ನು ವಿಶಾಲ್ ತಂದೆ ವೀರಭದ್ರಯ್ಯ

ತೃತೀಯ ಬಹುಮಾನ 2000 ರೂ ಗಳನ್ನು ಪ್ರವೀಣ ಪಾಟೀಲ್ ತಂದೆ ಬಸನಗೌಡ ಪಡೆದುಕೊಂಡರು ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಶ್ರೀ ಬಿ.ಕಿಶೋರ 2ನೇಪುಟಕ್ಕೆ

# ಹಂಚಿನಾಳ ಕ್ಯಾಂಪ್ ನಲ್ಲಿ ಸಹಕಾರ ಸಂಘದ ಸಹಯೋಗದಲ್ಲಿ ನೂತನ ಜೋಳ ಖರೀದಿ ಕೇಂದ್ರ ಪ್ರಾರಂಭ

ಧೈರ್ಯದ ದಾರಿ

**ಸಿಂಧನೂರು :** ಕರ್ನಾಟಕ ಸರ್ಕಾರವು ರೈತರಿಂದ ಬೆಂಬಲ ಬೆಲೆಯಲ್ಲಿ (M S P ) ಮುಂಗಾರು ಮತ್ತು ಹಿಂಗಾರು ಜೋಳ/ ಮೆಕ್ಕೆಜೋಳವನ್ನು ಖರೀದಿಸಲು ರಾಜ್ಯದ ವಿವಿಧ ಎಪಿಎಂಸಿ (APMC) ಮಾರುಕಟ್ಟೆಗಳಲ್ಲಿ ಖರೀದಿ ಕೇಂದ್ರಗಳನ್ನು ಆರಂಭಿಸಿದ್ದು. ಕೆಎಂಎಫ್ (KMF) ಮೂಲಕ ರೈತರಿಂದ ನೇರವಾಗಿ ಪ್ರತಿ ಕ್ವಿಂಟಾಲ್‌ಗೆ ಬೆಂಬಲ ಬೆಲೆ (ಉದಾಹರಣೆಗೆ 2,400–3,000) ನಿಗದಿಪಡಿಸಿ, ಒಬ್ಬ ರೈತರಿಂದ ಗರಿಷ್ಠ 20–25 ಕ್ವಿಂಟಾಲ್ ವರೆಗೆ ಖರೀದಿ ಮಾಡಲಾಗುತ್ತದೆ.ಈ ಹಿನ್ನೆಲೆಯಲ್ಲಿ ಸಿಂಧನೂರು ತಾಲೂಕಿನ ಹಂಚಿನಾಳ ಕ್ಯಾಂಪ್ ನ ಸಹಕಾರ ಸಂಘದ ವತಿಯಿಂದ ಇಂದು ಶುಕ್ರವಾರ ನೂತನ ಜೋಳ ಖರೀದಿ ಕೇಂದ್ರವನ್ನು ಜೋಳ ಖರೀದಿಸುವ ಮೂಲಕ ಜೋಳದ ರಾಶಿಗೆ ಪೂಜೆ ಸಲ್ಲಿಸಿ ಪ್ರಾರಂಭಿಸಲಾಯಿತು.

ಗದಗ, ಲಕ್ಷ್ಮೇಶ್ವರ, ಮುಂಡರಗಿ, ನರಗುಂದ, ರೋಣ ಮುಂತಾದ ಎಪಿಎಂಸಿ ಪ್ರಾಂಗಣಗಳಲ್ಲಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಪ್ರಕ್ರಿಯೆ: ಆಯಾ ಜಿಲ್ಲೆಯ ೦ಕಒಆ ಅಥವಾ ಕೃಷಿ ಇಲಾಖೆ ಕಚೇರಿಯಲ್ಲಿ ನೋಂದಣಿ ಮಾಡಿಕೊಳ್ಳಬೇಕು.

ಅಗತ್ಯ ದಾಖಲೆಗಳು: ಪಹಣಿ (RTC), ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಮತ್ತು ಬೆಳೆ ದೃಢೀಕರಣ ಪತ್ರ.



ಉದ್ದೇಶ: ಮಾರುಕಟ್ಟೆಯಲ್ಲಿ ಬೆಲೆ ಕುಸಿದಾಗ ರೈತರಿಗೆ ಬೆಂಬಲ ಬೆಲೆ ಒದಗಿಸಿ ನಷ್ಟ ತಪ್ಪಿಸುವುದು.
ರೈತರು ಹತ್ತಿರದ ಎಪಿಎಂಸಿ ಕೇಂದ್ರ ಅಥವಾ ಕೃಷಿ ಇಲಾಖೆಯನ್ನು ಸಂಪರ್ಕಿಸಿ ನಿಖರವಾದ ದರ ಮತ್ತು ನೋಂದಣಿ ದಿನಾಂಕದ ಬಗ್ಗೆ ಮಾಹಿತಿ ಪಡೆಯಬಹುದಾಗಿದೆ.

ಈ ಸಂದರ್ಭದಲ್ಲಿ ಶ್ರೀ ಶಂಬಣ್ಣ ಸಾಹುಕಾರ್, ಸೂಗೂರು ವೀರೇಶಪ್ಪ,ಉಪ ತಹಶೀಲ್ದಾರರು, ಕೃಷಿ ಅಧಿಕಾರಿಗಳು, ಸಂಘದ ಅಧ್ಯಕ್ಷರಾದ ಶೇಖರಗೌಡ ಸೇರಿದಂತೆ ನಿರ್ದೇಶಕರು ರೈತರು, ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು

ಮೊದಲನೇ ಪುಟದಿಂದ

# ಸಮಾನತೆ ಇಲ್ಲದ ಸ್ವಾತಂತ್ರ್ಯ ಅಪೂರ್ಣ: ಜಿಲ್ಲಾಧಿಕಾರಿ ನಿತೀಶ್ ಕೆ.

ಸಂಕಷ್ಟ ನಮಗೆ ಬರುವುದು ಶಕ್ತಿಶಾಲಿಯಾಗಿ ಮಾಡಲು ಬಲಹೀನರಾಗಿ ಮಾಡಲು ಅಲ್ಲ ಎಂದು ತಳ ಸಮುದಾಯದ ಜನರಿಗೆ ಧೈರ್ಯ ತುಂಬುವ ಕೆಲಸ ಮಾಡಿದ್ದರು. ಈ ಸಮಾಜದಲ್ಲಿ ಸಮಾನತೆ ಬರಬೇಕಾದರೆ ಶಿಕ್ಷಣದಿಂದ ಸಾಧ್ಯ ಎಂದು ಅವರು ಪದೇ – ಪದೇ ಹೇಳಿದ್ದರು. ಹಾಗಾಗಿ ತಳ ಸಮುದಾಯದ ಎಲ್ಲಾ ಮಕ್ಕಳು ಶಿಕ್ಷಣ ಪಡೆಯಬೇಕು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣ ಪ್ರಮಾಣ ಕಡಿಮೆ ಇದ್ದು, ಹೆಚ್ಚಿನ ಜನರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸುವುದರ ಮೂಲಕ ಬಾಬು ಜಗಜೀವನರಾಮ್ ಅವರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅವರ ಕನಸುಗಳನ್ನು ನಾವೆಲ್ಲರೂ ನನಸು ಮಾಡಬೇಕಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ರಾಯಚೂರು ಮಹಾನಗರ ಪಾಲಿಕೆಯ ಸದಸ್ಯ ಕಾರ್ಯದರ್ಶಿ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಅವರು ಮಾತನಾಡಿ, ಡಾ.ಬಾಬು ಜಗಜೀವನರಾಂ ಅವರು ಸಮಾಜದಲ್ಲಿ ಜಾತಿ ಬೇಧ ಮರೆತು ಸಮಾನತೆಗಾಗಿ ಶ್ರಮಿಸಿದ್ದ ಶ್ರೇಷ್ಠ ರಾಜಕೀಯ ಮುತ್ಸದ್ದಿ ಆಗಿ ಕಾರ್ಯನಿರ್ವಾಹಣೆ ಮಾಡಿದ್ದಾರೆ ಎಂದರು.

ಸಂಪುಟ ದರ್ಜೆಯ ಸಚಿವರಾಗಿ ದೇಶದ ಅಭಿವೃದ್ಧಿಗಾಗಿ ಶ್ರಮಿಸಿದ ಮಹಾನ್ ನಾಯಕ. ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ, ಶಿಕ್ಷಣದಿಂದ ಪ್ರತಿಯೊಬ್ಬ ವ್ಯಕ್ತಿಯೂ ಜೀವನದಲ್ಲಿ ಬದಲಾವಣೆ ಕಾಣಲು ಸಾಧ್ಯವಿದೆ ಎಂದು ಅವರು ನಂಬಿದ್ದವರು ಎಂದು ಹೇಳಿದರು.

ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣವನ್ನು ನೀಡಿದ್ದಾಗ ಮಾತ್ರ ಒಳ್ಳೆಯ ಉದ್ಯೋಗ ಅಧಿಕಾರ ಪಡೆಯಲು ಸಾಧ್ಯವಿದೆ. ಎಲ್ಲಾ ಸಮಾಜದವರು ಒಗ್ಗೂಡಿ ಇಂತಹ ಮಹಾನ್ ವ್ಯಕ್ತಿಗಳ ಜೀವನ ಕುರಿತು ಅರಿತುಕೊಳ್ಳಬೇಕು. ಅವರ ಸಾಧನೆ ಇಂದಿನ ಜನಾಂಗಕ್ಕೆ ಪ್ರೇರಣೆ ಆಗಬೇಕು' ಎಂದರು.

ಜಿಲ್ಲೆಯ ಮಾನ್ವಿ ಸರ್ಕಾರಿ ಪ್ರಥಮ ದರ್ಜೆ

ಕಾಲೇಜಿನ ಉಪನ್ಯಾಸಕರಾದ ಡಾ.ಬಸವರಾಜ ಕರಡಿಗುಡ್ಡ ಅವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಮಾಜಿ ಉಪ ಪ್ರಧಾನಿ ಬಾಬು ಜಗಜೀವನ ರಾಮ್ ಅವರು ಶೋಷಿತರ ಹಕ್ಕಿಗಾಗಿ ಹೋರಾಡಿದವರು, ಹಸಿರು ಕ್ರಾಂತಿಯ ಹರಿಕಾರ. ಆಹಾರ ಉತ್ಪಾದನೆ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ರು, ಕೃಷಿ, ರಕ್ಷಣಾ ಸಚಿವರಾಗಿ ಸೇವೆ ಸಲ್ಲಿಸಿದ್ರು, ಅವರ ಸೇವೆ ಸ್ಮರಣೀಯವಾದದು. ಅವರ ಜೀವನ ಚರಿತ್ರೆ ಯುವ ಪೀಳಿಗೆಗೆ ತಲುಪಿಸುವ ಕಾರ್ಯ ನಡೆಯಬೇಕು ಎಂದರು.

ದೇಶವು ಹಸಿವಿನಿಂದ ಬಳಲುತ್ತಿರುವ ವೇಳೆಯಲ್ಲಿ ದೇಶದ ಪರಿಸ್ಥಿತಿ ಅರಿತುಕೊಂಡು ಒಂದು ರೂಪುರೇಷೆಯನ್ನು ತಯಾರಿಸಿಕೊಂಡರು. ರೈತರು ಆಹಾರ ಧಾನ್ಯದಲ್ಲಿ ಹೆಚ್ಚುವರಿ ಇಳುವರಿ ಪಡೆಯಲು ಆಧುನಿಕ ಕೃಷಿ ಸಲಕರಣೆಗಳನ್ನು ಪರಿಚಯಿಸುವುದರ ಮೂಲಕ ಕೃಷಿಯಲ್ಲಿ ಬಹುದೊಡ್ಡ ಬದಲಾವಣೆ ತಂದರು ಎಂದರು.

ಬಾಬೂಜಿ ಅವರ ಮಹತ್ಕಾರ್ಯದಿಂದಾಗಿ ರೈತರು ಹೆಚ್ಚಿನ ಇಳುವರಿ ಮತ್ತು ಆರ್ಥಿಕ ಅಭಿವೃದ್ಧಿ ಕಾಣಲು ಸಾಧ್ಯವಾಯಿತು. ತಮಗೆ ಸಿಕ್ಕಂತಹ ಅಧಿಕಾರವನ್ನು ದೇಶದ ಅಭಿವೃದ್ಧಿ ಮತ್ತು ಸಮಸ್ಯೆಗಳ ನಿವಾರಣೆಗಾಗಿ ಅವಿರತವಾಗಿ ಶ್ರಮಿಸಿದ್ದ ಮಹಾನ್ ನಾಯಕ ಎಂದು ಬಣ್ಣಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಭಾರತ ಸಂವಿಧಾನದ ಪೀಠಿಕೆಯನ್ನು ಎಲ್ಲರಿಗೆ ಭೋದಿಸಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ಹತ್ತನೇ ತರಗತಿಯಲ್ಲಿ ಅತಿಹೆಚ್ಚು ಅಂಕಗಳನ್ನು ಗಳಿಸಿದ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಾದ ಶ್ರೇಯಾ ತಂದೆ ಸೋಮಪ್ಪ, ಶ್ರೀದೇವಿ ತಂದೆ ಶಿವರಾಜ, ಸ್ಫೂರ್ತಿ ಬಂಡಿವಡ್ಡರ ತಂದೆ ಶಿವಪ್ಪ ಬಂಡಿವಡ್ಡರ್ ಅವರಿಗೆ ಡಾ.ಬಾಬು ಜಗಜೀವನ ರಾಮ್ ಅವರ ಜಯಂತಿ ಅಂಗವಾಗಿ ವಿವಿಧ ಗಣ್ಯರಿಂದ ಸನ್ಮಾನಿಸಿ ಗೌರವಿಸಿದರು.

ವಿವಿಧ ಗಣ್ಯರಿಂದ ಛಾಯಾಚಿತ್ರ ವೀಕ್ಷಣೆ: ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರು ಜಯಂತಿ ಅಂಗವಾಗಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಬಾಬು ಜೀ ಜೀವನ, ಹೋರಾಟ, ಸಾಧನೆ ಕುರಿತು ಅವರ ಛಾಯಾಚಿತ್ರ ಪ್ರದರ್ಶನ ಏರ್ಪಡಿಸಲಾಗಿತ್ತು. ಛಾಯಾಚಿತ್ರಗಳನ್ನು ಜಿಲ್ಲಾಧಿಕಾರಿಗಳು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು. ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ವಿವಿಧ ಗಣ್ಯರು, ಸಾರ್ವಜನಿಕರು ವೀಕ್ಷಣೆ ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಆದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಕಪಕ ರಾಜೇಂದ್ರ ಜಲ್ದಾರ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಮಾಜದ ಇತರರು ಇದ್ದರು.

# ವೀರಯೋಧ ಮಲ್ಲಯ್ಯನಾಯಕ ಪೆದರಡ್ಡಿಯವರನ್ನು ಭವ್ಯವಾಗಿ ಸ್ವಾಗತಿಸಿದ ಶಾಸಕ ಹಂಪಯ್ಯನಾಯಕ

ತಾಲೂಕಿನ ನೀರಮಾನ್ವಿ ಗ್ರಾಮದ ಶ್ರೀ ರೇಣುಕ ಯಲ್ಲಮ್ಮ ದೇವಸ್ಥಾನದ ಹತ್ತಿರ ವೀರ ಯೋಧ ಮಲ್ಲಯ್ಯನಾಯಕ ಪೆದರಡ್ಡಿ ರವರನ್ನು ತಾಲೂಕಿಗೆ ಸ್ವಾಗತಿಸಲಾಯಿತು. ನೀರಮಾನ್ವಿ ಗ್ರಾಮದಿಂದ ಮಾನ್ವಿ ಪಟ್ಟಣ ಹಾಗೂ ಹಿರೇಕೋಟ್ನೆಕಲ್, ಪೋತ್ನಾಳ ಗ್ರಾಮದ ಮಾರ್ಗವಾಗಿ ತೆರೆದ ಜೀಪಿನಲ್ಲಿ ನೂರಾರು ದೇಶ ಅಭಿಮಾನಿಗಳು ಬೈಕ್ ಮೆರವಣಿಗೆ ಮೂಲಕ ದೇವಿಪುರ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ಮಹಿಳೆಯರು ಆರತಿ ಬೆಳಗಿ ತಮ್ಮೂರಿನ ವೀರ ಯೋಧನಿಗೆ


# ಪ್ರಸ್ತುತ ದಿನಮಾನಗಳಲ್ಲಿ ಪ್ರತಿಭೆ ಇದ್ದರೆ ಮಾತ್ರ ಯಶಸ್ಸು ಸಾಧ್ಯ ಡಾ. ಹೈಂದವಿ ಮಧುಸೂದನ್ ಗುಪ್ತಾಜೀ

ಕುಮಾರ್ ಇನ್ಫೋರ್ವ ಮುಖ್ಯಸ್ಥರಾದ ಶ್ರೀಮತಿ ಮಂಜುಳಾ ಕಿಶೋರ ಕುಮಾರ್ ಹಾಗೂ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಉಮಾಮಹೇಶ್ವರಿ ಮಧುಸೂದನ್ ಗುಪ್ತಾಜೀ ಭಾಗವಹಿಸಿದ್ದರು. ಕಾಲೇಜಿನ ಪ್ರಾಚಾರ್ಯರಾದ ಶ್ರೀ ವೀರಭದ್ರಯ್ಯ ಹಿರೇಮಠ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಶ್ರೀ ಮಧುಸೂದನ್ ಗುಪ್ತಾಜೀ ಅವರು ಕಟ್ಟಿ ಬೆಳೆಸಿದ ಈ ಸಂಸ್ಥೆಯಲ್ಲಿ ಗುಣಮಟ್ಟದ ಶಿಕ್ಷಣವನ್ನು ಪಡೆಯುವುದರ ಜೊತೆಗೆ ತಮ್ಮ ಜೀವನವನ್ನು ಕಟ್ಟಿಕೊಂಡಿದ್ದಾರೆ ನಮ್ಮ ಕಾಲೇಜಿನಲ್ಲಿ ವಿಜ್ಞಾನ ವಾಣಿಜ್ಯ ಹಾಗೂ ಕಲಾ ವಿ ಭಾಗದಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆಯುವುದರ ಜೊತೆ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನು ಪಡೆದುಕೊಂಡು ಬಂದಿದ್ದಾರೆ ಹೀಗಾಗಿ ಮುಂದಿನ ನಿಮ್ಮ ಉತ್ತಮವಾದ ಭವಿಷ್ಯವನ್ನು ಕಟ್ಟಿಕೊಳ್ಳಲು ನಮ್ಮ ಕಾಲೇಜಿನಲ್ಲಿ ದಾಖಲಾತಿಯನ್ನು ಪಡೆದು ಕೊಳ್ಳಿರಿ ಎಂದು ಹೇಳುವುದರ ಜೊತೆ ಜೀವನದಲ್ಲಿ ಹಲವು ಕೌಶಲಗಳನ್ನು ಕಲಿಯುವುದರ ಜೊತೆಗೆ ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಉಪನ್ಯಾಸಕರಾದ ಶ್ರೀ ಮಹಾಂತಗೌಡ ನಿರೂಪಿಸಿದರು ವಿದ್ಯಾರ್ಥಿನಿ ಲಲಿತಾ ಪ್ರಾರ್ಥಿಸಿದರು ಬಂದೇನವಾಜ್ ಸ್ವಾಗತಿಸಿದರು ಹಾಗೂ ಸುರೇಂದ್ರ ಹೊಂದಿಸಿದರು ಕಾರ್ಯಕ್ರಮದಲ್ಲಿ ಕಾಲೇಜಿನ ಎಲ್ಲಾ ಉಪನ್ಯಾಸಕರು ಉಪಸ್ಥಿತರಿದ್ದರು.

# ತಾಲೂಕಾಡಳಿತದಿಂದ ಡಾ.ಬಾಬು ಜಗಜೀವನರಾಮ್ ಜಯಂತಿ ಆಚರಣೆ

**ಮಸ್ಕಿ:** ಹಸಿರು ಕ್ರಾಂತಿ ಹರಿಕಾರ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನರಾಮ್ ಅವರ 118 ಜಯಂತಿಯನ್ನು ಭಾನುವಾರ ತಾಲೂಕಾಡಳಿತದಿಂದ ಆಚರಿಸಲಾಯಿತು.ಪಟ್ಟಣದ ತಹಸೀಲ್ದಾರ್ ಕಾರ್ಯಾಲಯದಲ್ಲಿ ತಹಸೀಲ್ದಾರ್ ಮಂಜುನಾಥ ಭೋಗಾವತಿ ಡಾ.ಬಾಬು ಜಗಜೀವನರಾಮ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿದರು. ನಂತರ ಮಾತನಾಡಿದ ಅವರು ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನರಾಮ್ ಅವರು ಶೋಷಿತರ ಹಕ್ಕಿಗಾಗಿ ಹೋರಾಡಿದವರು, ಹಸಿರು ಕ್ರಾಂತಿಯ ಹರಿಕಾರ. ಆಹಾರ ಉತ್ಪಾದನೆ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ರು. ಅವರ ಜೀವನ ಚರಿತ್ರೆ ಯುವ ಪೀಳಿಗೆಗೆ ತಲುಪಿಸುವ ಕಾರ್ಯ ನಡೆಯಬೇಕೆಂದರು.ಈ ಸಂದರ್ಭದಲ್ಲಿ ತಾ.ಪಂ ಇಒ ಅಮರೇಶ ಯಾದವ, ಪುರಸಭೆ ಮುಖ್ಯಾಧಿಕಾರಿ ನರಸರಡ್ಡಿ, ಸಿಪಿಐ ರಾಮಣ್ಣ ಜಳಗೇರಿ, ಸೋಮನಗೌಡ, ಕಂದಾಯ ನಿರೀಕ್ಷಕ ಮಹಾಂತೇಶ, ಗಂಗಾಪ್ಪ, ಅಮರೇಶ, ಬಸವರಾಜ, ಅಮರೇಶ ಸಜ್ಜನ, ಸುನೀಲ್‌ಕುಮಾರ, ನಾಗರತ್ನ ಕಟ್ಟಿಮನಿ, ಕಿರಣ ಮುರಾರಿ ಸೇರಿದಂತೆ ತಹಸೀಲ್ ಕಛೇರಿ ಸಿಬ್ಬಂದಿಗಳಿದ್ದರು.



ನಾಮಫಲಕ ಉದ್ಘಾಟನೆ: ಪಟ್ಟಣದ ಲಿಂಗಸುಗೂರು ರಸ್ತೆಯಲ್ಲಿ ನೂತನವಾಗಿ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನರಾಮ್ ನಾಮಫಲಕವನ್ನು ಉದ್ಘಾಟಿಸಲಾಯಿತು. ವಿವಿಧೆಡೆ: ತಾಲೂಕು ಪಂಚಾಯಿತಿ, ನೀರಾವರಿ ಇಲಾಖೆ, ನಗರ ಯೋಜನಾ ಪ್ರಾಧಿಕಾರ ಕಛೇರಿ, ರೈತ ಸಂಪರ್ಕ ಕೇಂದ್ರ, ಸರ್ವೆ ಮತ್ತು ಭೂ ದಾಖಲೆ ಇಲಾಖೆ, ಮಸ್ಕಿ ನಾಲಾ ಯೋಜನಾ ಕಛೇರಿ, ಶಾಸಕರ ಕಾರ್ಯಾಲಯ ಸೇರಿದಂತೆ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷದ ಕಾರ್ಯಾಲಯಗಳಲ್ಲಿ ಡಾ.ಬಾಬು ಜಗಜೀವನರಾಮ್ ಅವರ ಜಯಂತಿಯನ್ನು ಆಚರಿಸಿದರು.

# ಶ್ರೀಶೈಲ ಪೀಠದ ಜಗದ್ಗುರು ಶ್ರೀ ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾ ಭಗವತ್ಪಾದಂಗಳವರ ವೈಭವದ ಅಡ್ಡಪಲ್ಲಕ್ಕಿ ಮಹೋತ್ಸವ

ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಹಿರೇಕೋಟ್ನೆಕಲ್ ಗ್ರಾಮದಲ್ಲಿನ ಶ್ರೀಶೈಲ ಪೀಠದ ಶಾಖಾ ಮಠವಾಗಿರುವ ಶ್ರೀ ಗುರುಶಾಂತ ಶಿವಾಚಾರ್ಯ ವಿದ್ಯಾಪೀಠ ಲಿಂ,ಶಂಕ್ರಮ್ಮ,ಲಿಂ. ಅಮರಗುಂಡಯ್ಯಸ್ವಾಮಿ ಹಿರೇಮಠದಲ್ಲಿ ಶ್ರೀ ಜಗದ್ಗುರು ಪಂಡಿತಾರಾಧ್ಯರ ನೂತನ ಶಿಲಾಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಭೋಗವತಿ ಗ್ರಾಮದ ಶ್ರೀ ರಾಮಲಿಂಗೇಶ್ವರ ದೇವಸ್ಥಾನದ ಆವರಣದಿಂದ ಶ್ರೀಮಠದ ವರೆಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನೂರಾರು ಮುತ್ತೈದೆಯರು ಕಳಸ,ಕುಂಭದೊಂದಿಗೆ ಹಾಗೂ ನಂದಿಕೋಲು ಕುಣಿತ,ವೀರಗಾಸೆ ಕಲಾವಿದರ ಕುಣಿತ, ಡೋಳ್ಳು ಕುಣಿತ ಸೇರಿದಂತೆ ವಿವಿಧ ಜನಪದ ಕಲಾ ತಂಡಗಳೊಂದಿಗೆ , ಸಕಾಲ ವಾದ್ಯಗಳೊಂದಿಗೆ ಶ್ರೀಶೈಲ ಪೀಠದ ಜಗದ್ಗುರು ಶ್ರೀ ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾ ಭಗವತ್ಪಾದಂಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಭಕ್ತಿಭಾವದಿಂದ ನಡೆಯಿತು.

ನಂತರ ಶ್ರೀಮಠದಲ್ಲಿ ಶ್ರೀಶೈಲ ಪೀಠದ ಜಗದ್ಗುರು ಶ್ರೀ ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾ ಭಗವತ್ಪಾದಂಗಳವರ ದಿವ್ಯಸಾನಿಧ್ಯದಲ್ಲಿ ನೂತನ ಶ್ರೀ ಜಗದ್ಗುರು ಪಂಡಿತಾರಾಧ್ಯರ ಶಿಲಾಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. 501 ಮುತ್ತೈದೆಯರಿಗೆ ಸಾಮೂಹಿಕವಾಗಿ ಉಡಿತುಂಬುವ ಕಾರ್ಯಕ್ರಮ ನಡೆಯಿತು, ಮದ್ಲಾಪುರ ರುದ್ರಯ್ಯಶಾಸ್ತ್ರಿಗಳಿಂದ ನಡೆದ ಒಳಬಳ್ಳಾರಿ ಚನ್ನಬಸವ ಶಿವಯೋಗಿಗಳ ಪುರಾಣ ಪ್ರವಚನದ ಮಹಾಮಂಗಲ ನೆರವೇರಿತು.

ಕಲ್ಮಠ ಶ್ರೀ ವಿರುಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಕರೇಗುಡ್ಡ ಶ್ರೀ ಮಹಾಂತೇಶ್ವರಮಠದ ಶ್ರೀ



ಮಹಾಂತಲಿಂಗ ಮಹಾಸ್ವಾಮಿಗಳು, ದೇವರ ಭೂಪುರ ಸಂಸ್ಥಾನ ಮಠದ ಶ್ರೀ ಅಭಿನವ ಗಜದಂಡ ಶಿವಾಚಾರ್ಯ ಮಹಾಸ್ವಾಮಿಗಳು, ನೀಲಗಲ್ ಬೃಹನ್ಮಠ ಅಭಿನವ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು,ಸುಲ್ತಾನಪುರ ಸಂಸ್ಥಾನ ಹಿರೇಮಠ ಶಂಬು ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು, ಉಟಕನೂರು ಶ್ರೀ ಅಡವಿಸಿದ್ದೇಶ್ವರ ಮಠದ ಶ್ರೀ ಮರಿಬಸವ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು,ರೌಡಕುಂದಾ ಹಿರೇಮಠದ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು, ಸಿದ್ದರಾಮ ಶರಣರು ವೆಂಕಟಗಿರಿ ಕ್ಯಾಂಪ್ ರೌಡಕುಂದಾ,ಬಲ್ಲಟ್ಗಿ ಗುರುಬಸವತಾತ ,ಕಿಡಿಗಣ್ಣಯ್ಯಸ್ವಾಮಿ ಉಮಳಿಹೊಸೂರು ಹಾಗೂ ಶ್ರೀ ಮಠದ ಚನ್ನಬಸಯ್ಯಸ್ವಾಮಿ ಹಿರೇಮಠ ,ಶಾಂತಮೂರ್ತಿಸ್ವಾಮಿ ಹಿರೇಮಠ ಮತ್ತು ಸಹೋದರರು , ಗ್ರಾಮದ ಮುಖಂಡರಾದ ದೊಡ್ಡಬಸಪ್ಪಗೌಡ ಭೋಗವತಿ ,ತಿಮ್ಮರೆಡ್ಡಿಗೌಡ ಭೋಗವತಿ,ವೀರಭದ್ರಗೌಡ ಭೋಗವತಿ, ಸೇರಿದಂತೆ ಗ್ರಾಮದ ಸಾವಿರಾರು ಭಕ್ತರು ಭಾಗವಹಿಸಿದರು.

# ಡಾ.ಬಾಬು ಜಗಜೀವನ ರಾಮ್ 119ನೇ ಜನ್ಮ ದಿನಾಚರಣೆ: ಗಣ್ಯರಿಂದ ಮಾಲಾರ್ಪಣೆ, ಮೆರವಣಿಗೆಗೆ ಚಾಲನೆ

**ರಾಯಚೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರ ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಭಾರತ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ 119ನೇ ಜನ್ಮ ದಿನಾಚರಣೆಯ ಅಂಗವಾಗಿ ಏಪ್ರಿಲ್ 5ರ ಭಾನುವಾರ ದಂದು ನಗರದ ರೈಲ್ವೆ ನಿಲ್ದಾಣದ ಹತ್ತಿರವಿರುವ ಡಾ.ಬಾಬು ಜಗಜೀವನ ರಾಮ್ ಅವರ ಪುತ್ಥಳಿಗೆ ವಿವಿಧ ಗಣ್ಯರಿಂದ ಪೂಜೆ ಕಾರ್ಯಕ್ರಮ ನೆರವೇರಿಸಿ, ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ್ ನಾಯಕ, ಜಿಲ್ಲಾಧಿಕಾರಿ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್, ಮುಖಂಡರಾದ ರವಿ ಭೋಸರಾಜು, ನರಸಿಂಹಲು ಮಾಡಗಿರಿ, ಕೆ.ಶಾಂತಪ್ಪ, ಎಂ.ವಿರೂಪಾಕ್ಷಪ್ಪ, ರಾಜು, ಪವನ್ ಕುಮಾರ್, ರಾಜೇಂದ್ರ ಜಲ್ದಾರ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಮಾಜದ ಇತರರು ಇದ್ದರು.

ಇತ್ತೀಚೆಗೆ ಮುಖ್ಯಮಂತ್ರಿ ಪದಕಕ್ಕೆ ಆಯ್ಕೆಯಾದ ರಾಯಚೂರು ಡಿವೈಎಸ್ಪಿ ಶಾಂತವೀರ ಅವರಿಗೆ ಗಣ್ಯರಿಂದ ಇದೇ ಸಂದರ್ಬದಲ್ಲಿ ಸನ್ಮಾನ ಮಾಡಲಾಯಿತು.

ನಂತರ ಭಾರತ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ ಭಾವಚಿತ್ರದ ಮೆರವಣಿಗೆಗೆ ವಿವಿಧ ಗಣ್ಯರಿಂದ ಚಾಲನೆ ನೀಡಲಾಯಿತು. ಮೆರವಣಿಗೆಯು ನಗರದ ರೈಲ್ವೆ ನಿಲ್ದಾಣದಿಂದ ರಂಗಮಂದಿರದವರೆಗೂ ನಡೆಯಿತು.

# ದೇವದುರ್ಗ: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರತಾತ್ಕಾಲಿಕ ಪಟ್ಟಿ ಪ್ರಕಟ; ಆಕ್ಷೇಪಣೆ ಸಲ್ಲಿಸಲು ಅರ್ಜಿ ಆಹ್ವಾನ

**ರಾಯಚೂರು:** ಜಿಲ್ಲೆಯ ದೇವದುರ್ಗ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಖಾಲಿ ಇದ್ದ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. 27 ಅಂಗನವಾಡಿ ಕಾರ್ಯಕರ್ತೆಯರ ಹುದ್ದೆ ಮತ್ತು 76 ಸಹಾಯಕಿಯರ ಖಾಲಿ ಇದ್ದ ಹುದ್ದೆಗಳಿಗೆ ಜಿಲ್ಲಾ ಆಯ್ಕೆ ಸಮಿತಿಯು ಅರ್ಹ ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಿರುವದರಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಕ್ಷೇಪಣೆಗಳು ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಆಕ್ಷೇಪಣೆ ಅರ್ಜಿಯನ್ನು ಸೂಕ್ತ ದಾಖಲಾತಿಗಳೊಂದಿಗೆ ದಿನಾಂಕ: 04.04.2026 ರಿಂದ 13.04.2026 ರೊಳಗೆ ಸಮಯ ಬೆಳಿಗ್ಗೆ 08:00 ಗಂಟೆಯಿಂದ ಮಧ್ಯಾಹ್ನ 01.30ರವರೆಗೆ ಸಲ್ಲಿಸಬಹುದಾಗಿದೆ.

ಆಕ್ಷೇಪಣೆ ಸಲ್ಲಿಸುವವರು ಆಕ್ಷೇಪಣೆ ಅರ್ಜಿಯ ಜೊತೆಗೆ ಯಾವುದೇ ದಾಖಲಾತಿಗಳು ಸಲ್ಲಿಸದಿದ್ದಲ್ಲಿ ಅಂಥವರ ಆಕ್ಷೇಪಣೆ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹಾಗೂ ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಡಾ.ಅರಷಿಣಗಿ ಬಿಲ್ಡಿಂಗ್ ನಗರಗುಂಡ ರೋಡ್, ದೇವದುರ್ಗ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ದೇವದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಹೇಶ ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿ.ಪಂನಿಂದ ಕುಡಿಯುವ ನೀರಿನ ಸಮಸ್ಯೆಗಳಿಗೆ ಸಹಾಯ ವಾಣಿ ಆರಂಭ

**ರಾಯಚೂರು:** ಬೇಸಿಗೆ ನಿಮಿತ್ತ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಜಲಮೂಲಗಳ ಕೊರತೆ ಅಥವಾ ಜಲಮೂಲಗಳು ಬತ್ತಿಹೋಗುವ ಮೂಲಕ ತಲೆದೂರಬಹುದಾದ ಕುಡಿಯುವ ನೀರಿನ ಸಮಸ್ಯೆ ಹಾಗೂ ಅನೈರ್ಮಲ್ಯ ವಾತಾವರಣದಿಂದಾಗಿ ಉಂಟಾಗಬಹುದಾದ ಆನಾರೋಗ್ಯದ ಸಮಸ್ಯೆಗಳನ್ನು ಯಶಸ್ವಿಯಾಗಿ ನಿಯಂತ್ರಿಸಿ ಅಗತ್ಯ ಪರಿಹಾರ ಕಲ್ಪಿಸಲು ಆಯಾ ಗ್ರಾಮ ಪಂಚಾಯತಿ ಅಥವಾ ಸ್ಥಳೀಯ ಸಂಸ್ಥೆಗಳಿಂದ ಕೈಗೊಳ್ಳಬೇಕಾದ ಮುಂಜಾಗೃತಾ ಕ್ರಮಗಳ ಬಗ್ಗೆ ಜಿಲ್ಲಾ ಪಂಚಾತಿಯ ಕುಂದುಕೊರತೆ ನಿವಾರಣಾ ಘಟಕದ ದೂರವಾಣಿ ಸಂಖ್ಯೆ: 08532-230539ಗೆ ಸಾರ್ವಜನಿಕರು ನೇರವಾಗಿ ಸಂಪರ್ಕಿಸಿ ತಮ್ಮ-ತಮ್ಮ ಕುಂದುಕೊರತೆ ಅಥವಾ ಆಹ್ವಾಲುಗಳನ್ನು ನೊಂದಾಯಿಸಿ ಪರಿಹಾರ ಪಡೆಯಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂನಿಂದ ಏಪ್ರಿಲ್ 07ರಂದು ವಿದ್ಯುತ್ ವ್ಯತ್ಯಯ

**ರಾಯಚೂರು:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ 110 ಕೆ.ವಿ ಮೇಸ್, ಎಪಿಎಮ್‌ಸಿ ಯಾರ್ಡ್ 3 ಡ್ರಾಗ್‌ಹೌಸ್ ಲಿಂಕ್ ಲೈನ್ ಕಾಮಗಾರಿ ನಡೆಯುವ ಪ್ರಯುಕ್ತ ಏಪ್ರಿಲ್ 07ರ ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ ಅಲ್ಲಮಪ್ರಭು ಕಾಲೋನಿ, ಪೋತಗಲ್ ರೋಡ, ಎಲ್.ಬಿ.ಎಸ್. ನಗರ, ಅಲಿ ಕಾಲೋನಿ, ಚಂದ್ರಬಂಡ ರಸ್ತೆ, ಸಂತೋಷ ನಗರ, ವಿಶ್ವನಾಥ ಕಾಲೋನಿ, ಪೋತಗಲ್ ಕ್ರಾಸ್, ಆಶ್ರಯ ಕಾಲೋನಿ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರಂತರ ಗ್ರಾಹಕರ ಸೇವಾ ಕೇಂದ್ರ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ ಸಹಾಯಕಕಾರ್ಯನಿರ್ವಾಹಕಅಭಿಯಂತರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೀರಶೈವ ಲಿಂಗಾಯತ ಧರ್ಮವು ಸಂವಿಧಾನಬದ್ಧವಾದ ಧಾರ್ಮಿಕ ವ್ಯವಸ್ಥೆಯನ್ನು ಹೊಂದಿದೆ : ಶ್ರೀಶೈಲ ಜಗದ್ಗುರುಗಳು



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಹಿರೇಕೋಟ್ನೆಕಲ್ ಗ್ರಾಮದಲ್ಲಿನ ಶ್ರೀ ಗುರುಶಾಂತ ಶೀವಾಚಾರ್ಯ ವಿದ್ಯಾಪೀಠದ ಆವರಣದಲ್ಲಿ ನಡೆದ ಸರ್ವಧರ್ಮ ಸಮ್ಮೇಳನ ಕಾರ್ಯಕ್ರಮದ ಧರ್ಮಸಭೆಯನ್ನು ಉದ್ಘಾಟಿಸಿ ಶ್ರೀಶೈಲ ಪೀಠದ ಜಗದ್ಗುರು ಶ್ರೀ ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾ ಭಗವತ್ಪಾದಂಗಳವರು ಆರ್ಶೀವಾಚನ ನೀಡಿ ದೇಶದಲ್ಲಿ ವೀರಶೈವ ಲಿಂಗಾಯತ ಧರ್ಮವು ಸಂವಿಧಾನಬದ್ದವಾದ ಧಾರ್ಮಿಕ ವ್ಯವಸ್ಥೆಯನ್ನು ಹೊಂದಿದೆ ಪ್ರಥಮವಾಗಿ ಪಂಚಪೀಠಗಳ ಐವರು ಜಗದ್ಗುರುಗಳು ದೇಶದ ಎಲ್ಲಾ ಶಿವಾಚಾರ್ಯರಿಗೆ ಧಾರ್ಮಿಕ ತತ್ವ,ಆಚರಣೆಗಳನ್ನು ,ಭೋದಿಸುವರು ನಂತರ ಶಿವಾಚಾರ್ಯರು ತಮ್ಮ ಮಠಗಳ ಮೂಲಕ ಗ್ರಾಮ ಮಟ್ಟದಲ್ಲಿರುವ ಶಾಖಾ ಮಠಗಳ ಹಿರೇಮಠದವರಿಗೆ ಜನಸಾಮಾನ್ಯರಿಗೆ ಶಿವನ ತತ್ವಗಳನ್ನು ಭೋದಿಸಿಕೊಂಡು ಜನರನ್ನು ಧರ್ಮದ ಹಾದಿಯಲ್ಲಿ ನಡೆಯುವಂತೆ ನೋಡಿಕೊಳ್ಳುವ ಅಧಿಕಾರವನ್ನು ನೀಡುತ್ತಾರೆ. ಇಂತಹ ಧಾರ್ಮಿಕ ವ್ಯವಸ್ಥೆ ವೀರಶೈವ ಲಿಂಗಾಯತ ಧರ್ಮದ ಪರಂಪರೆಯಲ್ಲಿ ಮಾತ್ರ ಕಾಣುವುದಕ್ಕೆ ಸಾಧ್ಯವಾಗುತ್ತದೆ. ನಾಡಿನ ಸಾವಿರಾರು ಮಠಗಳು ತಮ್ಮ ಮಠದ ಸತ್ ಪರಂಪರೆಯನ್ನು ಧಾರ್ಮಿಕ ಆಚರಣೆಗಳನ್ನು ಉಳಿಸಿಕೊಳ್ಳುವುದರೊಂದಿಗೆ ಶಿಕ್ಷಣ ಸಂಸ್ಥೆಗಳನ್ನು ಕಟ್ಟಿ ಸಮಾಜವನ್ನು ಶಿಕ್ಷಿತರನ್ನಾಗಿಸುವಲ್ಲಿ ಶ್ರೀಮಠಗಳ ಶ್ರೀಗಳು ನಿರಂತರವಾಗಿ ಶ್ರಮಿಸುತ್ತಿದ್ದಾರೆ.

ಸಾಕ್ಷತ್ ಶಿವನೇ ಗುರುವಿಗಿಂತ ದೊಡ್ಡವರಿಲ್ಲ ಎಂದು ಅಗಮಗಳ ಮೂಲಕ ತಿಳಿಸಿದ್ದು ಗುರುವಿನ ಮೂಲಕವೇ ಉನ್ನತವಾದ ಧಾರ್ಮಿಕ ಸಂಸ್ಕರಗಳನ್ನು, ಧರ್ಮೋಪದೇಶವನ್ನು ,ಮೌಲ್ಯಗಳನ್ನು ಹೊಂದುವುದಕ್ಕೆ ಸಾಧ್ಯ. ಪ್ರತಿಬಾರಿ ಕೂಡ ಭಗವಂತ ಭೂಮಿಗೆ ದುಷ್ಟರ ಸಂಹಾರಕ್ಕಾಗಿ ಅವತಾರಿಸುತ್ತಾನೆ ಅದ್ದರು ಕೂಡ ದುಷ್ಟರ ಸಂಹಾರ ಕಲಿಯುಗದಲ್ಲಿ ಸಂಪೂರ್ಣವಾಗಿ ಸಾಧ್ಯವಿಲ್ಲ ಎಂದು ಶಿವನೇ ಗುರುವಿನ ಅವತಾರದಲ್ಲಿ ಬಂದು ಜನರಲ್ಲಿನ ದುಷ್ಟ ಬುದ್ದಿಯನ್ನು ಕಳೆಯುವ

ಕಾರ್ಯವನ್ನು ಮಾಡುತ್ತಿದ್ದಾನೆ. ಒಂದು ಮಠ ಪರಿಪೂರ್ಣವಾಗಬೇಕಾದರೆ ಆ ಮಠವು ತನ್ನ ವ್ಯಾಪ್ತಿಯಲ್ಲಿ ಬರುವ ಜನರಿಗೆ ಕೊರಳಲ್ಲಿ ಇಷ್ಟಲಿಂಗವನ್ನು ಧಾರಣೆ ಮಾಡಿ ನಿತ್ಯ ಇಷ್ಟಲಿಂಗದ ಪೂಜೆಯನ್ನು ಮಾಡಿಕೊಳ್ಳುವಂತೆ ಪ್ರೇರಣೆ ನೀಡಬೇಕು. ಪ್ರತಿಯೊಬ್ಬರು ಕೂಡ ತಮ್ಮ ಸ್ವಧರ್ಮದ ಬಗ್ಗೆ ನಿಷ್ಠೆಯನ್ನು ಹೊಂದಿ ಪರಧರ್ಮದ ಬಗ್ಗೆ ಸಹಿಷ್ಣತೆಯನ್ನು ಹೊಂದಿರಬೇಕು .ಅವರವರ ಧರ್ಮಗಳ ಆಚರಣೆಗೆ ಮುಕ್ತವಾದ ಅವಕಾಶವನ್ನು ಹೊಂದಿರುವಂತೆ ನೋಡಿಕೊಳ್ಳಬೇಕು. ಧರ್ಮ ,ಧರ್ಮದ ನಡುವಿನ ಕಿತ್ತಾಟ ಬಿಟ್ಟು ದೇಶದ ಅಭಿವೃದ್ಧಿಗೆ ಶ್ರಮಿಸಬೇಕು,ದೇಶ ಉಳಿದಾಗ ಮಾತ್ರ ಧರ್ಮ ಉಳಿಯುತ್ತದೆ ಎಂದು ತಿಳಿಸಿದರು.ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಪಾಟೀಲ್ ಮಿರ್ಜಾಪುರ್ ಮಾತನಾಡಿ ನಾಡಿನ ಮಠಗಳು ಸಾನತನ ಧರ್ಮದ ಉಳಿವಿಗಾಗಿ ಹಾಗೂ ಧರ್ಮ ಮಾರ್ಗದಲ್ಲಿ ನಡೆಯುವಂತೆ ನಿರಂತರವಾಗಿ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುವ ಮೂಲಕ ಜಾಗೃತಿಯನ್ನು ಮೂಡಿಸಿಕೊಂಡು ಬರುತ್ತಿವೆ. ಇಂತಹ ಕಾರ್ಯಕ್ರಮಗಳಿಂದ ನಮ್ಮ ಧರ್ಮ,ಪರಂಪರೆಯ ಬಗ್ಗೆ ತಿಳಿದು ಕೊಳ್ಳುವುದಕ್ಕೆ ಸಾಧ್ಯವಾಗುತ್ತಿವೆ ನಾಡಿನ ಜನರಲ್ಲಿ ಧಾರ್ಮಿಕ ಭಾವನೆಗಳನ್ನು ಬೆಳೆಸುವಲ್ಲಿ ಪಂಚಪೀಠಗಳು ಶ್ರಮಿಸುತ್ತಿವೆ ಎಂದು ತಿಳಿಸಿದರು.ಕಲ್ಮಠ ಶ್ರೀ ವಿರುಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಕರೇಗುಡ್ಡ ಶ್ರೀ ಮಹಾಂತೇಶ್ವರಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು, ದೇವರ ಭೂಪುರ ಸಂಸ್ಥಾನ ಮಠದ ಶ್ರೀ ಅಭಿನವ ಗಜದಂಡ ಶಿವಾಚಾರ್ಯ ಮಹಾಸ್ವಾಮಿಗಳು, ನೀಲಗಲ್ ಬೃಹನ್ಮಠ ಅಭಿನವ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು,ಸುಲ್ತಾನಪುರ ಸಂಸ್ಥಾನ ಹಿರೇಮಠ ಶಂಬು ಶೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು, ಉಟಕನೂರು ಶ್ರೀ ಅಡವಿಸಿದ್ದೇಶ್ವರ ಮಠದ ಶ್ರೀ ಮರಿಬಸವ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು,ರೌಡಕುಂದಾ ಹಿರೇಮಠದ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು, ಸಿದ್ದರಾಮ ಶರಣರು ವೆಂಕಟಗಿರಿ ಕ್ಯಾಂಪ್ ರೌಡಕುಂದಾ,ಬಲ್ಲಟ್ಟಗಿ ಗುರುಬಸವತಾತ , , ಕಿಡಿಗಣ್ಣಯ್ಯಸ್ವಾಮಿ ಉಮಳಿಹೊಸೂರು ಹಾಗೂ ಶ್ರೀ ಮಠದ ಚನ್ನಬಸಯ್ಯಸ್ವಾಮಿ ಹಿರೇಮಠ ,ಶಾಂತಮೂರ್ತಿಸ್ವಾಮಿ ಹಿರೇಮಠ ಮತ್ತು ಸಹೋದರರು , ಗ್ರಾಮದ ಮುಖಂಡರಾದ ದೊಡ್ಡಬಸಪ್ಪಗೌಡ ಭೋಗವತಿ ,ತಿಮ್ಮರೆಡ್ಡಿಗೌಡ ಭೋಗವತಿ,ವೀರಭದ್ರಗೌಡ ಭೋಗವತಿ, ಸೇರಿದಂತೆ ಗ್ರಾಮದ ಸಾವಿರಾರು ಭಕ್ತರು ಭಾಗವಹಿಸಿದರು.

# ಸದಸ್ಯತ್ವಕ್ಕೆ ಚಾಲನೆ



**ಲಕ್ಷ್ಮೇಶ್ವರ,ಏ.5:** ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಒಳಪಂಗಡಗಳು ಒಂದಾಗಿ ಹೋಗಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾದ್ಯಕ್ಷ ಶರಣಬಸವ ಗುಡಿಮನಿ ಹೇಳಿದರು

ಅವರು ಪಟ್ಟಣದ ಜಗದ್ಗುರು ವೀರಗಂಗಾಧರ ಸಮುದಾಯ ಕಲ್ಯಾಣ ಮಂಟಪದಲ್ಲಿ ತಾಲೂಕ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಸದಸ್ಯತ್ವ ಅಭಿಯಾನದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಶತಮಾನ ಕಂಡಿದ್ದು ಶ್ರೀ ಹಾನಗಲ ಗುರು ಕುಮಾರೇಶ್ವರ ಸಂಕಲ್ಪದಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಸಮಾಜದ ಪ್ರತಿಯೊಬ್ಬರು ಒಂದಾಗಬೇಕೆಂಬುದು ಅವರ ಆಸೆಯಾಗಿತ್ತು ಅದರಂತೆ ಭಿನ್ನಾಭಿಪ್ರಾಯಗಳನ್ನು ಮರೆತು ಸಮಾಜ ಕಟ್ಟುವಲ್ಲಿ ಪ್ರತಿಯೊಬ್ಬರು ಶ್ರಮಿಸಬೇಕು

ಸಮಾಜಕ್ಕೆ ತನ್ನದೇ ಆದ ಸುದೀರ್ಘ ಇತಿಹಾಸ ಇದೆ, ಭವ್ಯತೆ ಇದೆ, ಶ್ರೇಷ್ಠತೆಯೂ ಇದೆ

ಎಂದು ಹೇಳಿದರು,

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಸಲಹಾ ಸಮಿತಿ ಸದಸ್ಯ ಚಂದ್ರು ಬಾಳಿಹಳ್ಳಿಮಠ ಮಾತನಾಡಿ ಸದಸ್ಯತ್ವ ಅಭಿಯಾನದಲ್ಲಿ ಪ್ರತಿಯೊಬ್ಬರು ಭಾಗವಹಿಸಬೇಕು ವೀರಶೈವ ಲಿಂಗಾಯತದ ಬಗ್ಗೆ ಯಾವುದೇ ಗೊಂದಲ ಇಲ್ಲ. ಒಗ್ಗೂಡಿಸುವ ಕಾರ್ಯದಲ್ಲಿ ತೊಡಗಿದ್ದೇವೆ.

ಸಮಾಜದ ಎಲ್ಲ ಒಳ ಪಂಗಡಗಳನ್ನು ಒಗ್ಗೂಡಿಸುವುದು ಅತ್ಯಂತ ಮುಖ್ಯವಾಗಿದ್ದು, ತಾವು ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಕಾರ್ಯದರ್ಶಿ ಮುರುಗೇಂದ್ರ ಬಡ್ನಿ ಉಪಾಧ್ಯಕ್ಷಬಸವರಾಜ ಅಂಗಡಿ. ಖಜಾಂಚಿ ಚನವೀರಪ್ಪ ಹುಣಸಿಕಟ್ಟಿ . ನಿರ್ದೇಶಕ ಬಾಪೂಜಿ ಪಾಟೀಲ . ಚನ್ನಪ್ಪ ಜಗಲಿ ಪ್ರವೀಣ ಬಾಳಿಕಾಯಿ. ಸುನೀಲ ಮಹಾಂತಶೆಟ್ಟರ . ಮಂಜುನಾಥ್ ಚಾಕಲಬ್ಬಿ ಶಿವಲಿಂಗಪ್ಪ ಅಣ್ಣಿಗೇರಿ. ಸಂತೋಷ ಜಾವೂರ. ಎಮ್ ಎಸ್ ಹಿರೇಮಠ.ಎಂ ಕೆ ಕಳ್ಳಿ ಮಠ. ಚಿಕ್ಕನಗೌಡರ. ಮಹೇಶ ಹೊಗೆಸೊಪ್ಪಿನ. ಶರಣು ಗೋಡಿ ಉಪಸ್ಥಿತರಿದ್ದರು

# ಸ್ವಯಂ-ಗಣತಿ ನಡೆಯುವಂತೆ ಪ್ರೋತ್ಸಾಹಿಸಿ



**ನವಲಗುಂದ, ಏ.5:** ಏ 16ರಿಂದ ಮೇ 15ರವರೆಗೆ ಜನವಸತಿ ಕಟ್ಟಡಗಳ ಸ್ಥಿತಿ, ಸೌಲಭ್ಯಗಳು ಹಾಗೂ ಸ್ವತ್ತುಗಳ ಕುರಿತು ವಿವರವಾದ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಎಸ್ ಪಿ ಪೂಜಾರ ಹೇಳಿದರು.

ಸ್ಥಳೀಯ ಪುರಸಭೆ ವ್ಯಾಪ್ತಿಯಲ್ಲಿ ಭಾರತ್ ಜನಗಣತಿ 2027ರ ಮನೆ ಪಟ್ಟಿ ಕಾರ್ಯಾಚರಣೆಯ ಮೇಲ್ವಿಚಾರಕರು ಹಾಗೂ ಗಣತಿದಾರರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗಣತಿದಾರರು ತಮ್ಮ ಬ್ಲಾಕ್ ಪ್ರದೇಶಗಳಲ್ಲಿ ಏ.15 ರ ವರಿಗೆ ಸ್ವಯಂ ಗಣತಿಗೆ ಮಾಡಿಕೋಳ್ಳಬಹುದು. ನಂತರ ಸಂಚರಿಸಿ ಮಾಹಿತಿ ಸಂಗ್ರಹಿಸಿಕೊಳ್ಳಬೇಕು, ಜಾಗೃತಿ ಮೂಡಿಸಿ ಹೆಚ್ಚಿನ ಪ್ರಮಾಣದಲ್ಲಿ ಸ್ವಯಂ-ಗಣತಿ ನಡೆಯುವಂತೆ ಪ್ರೋತ್ಸಾಹಿಸಬೇಕು' ಎಂದರು.

ಕ್ಷೇತ್ರಶಿಕ್ಷಣಾಧಿಕಾರಿ ದೀಪಕ ಕುಲಕರ್ಣಿ ಮಾತನಾಡಿ ಪ್ರತಿ ಗಣತಿದಾರರು ಮನೆಮನೆಗೆ ತೆರಳಿ ಸರಿಯಾದ ಹಾಗೂ ನಿಖರ ಮಾಹಿತಿ ಸಂಗ್ರಹಿಸುವ ಮೂಲಕ ಜನಗಣತಿಯ ಯಶಸ್ಸಿಗೆ ಕೈಜೋಡಿಸಬೇಕು. ಪ್ರತಿಯೊಬ್ಬ ಗಣತಿದಾರರು ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ಮತ್ತು ಜವಾಬ್ದಾರಿಯಿಂದ ನೆರವೇರಿಸಬೇಕು' ಸಾರ್ವಜನಿಕರೊಂದಿಗೆ ಉತ್ತಮ ಸಂವಹನ ಬೆಳೆಸಿ, ಅವರಿಗೆ ಸ್ವಯಂ-ಗಣತಿ ಕುರಿತು ಸ್ಪಷ್ಟ ಮಾಹಿತಿ ನೀಡಿ ಸಹಕಾರ ಪಡೆಯುವುದು ಅಗತ್ಯವಾಗಿದೆ' ಎಂದರು.

ಕ್ಷೇತ್ರ ತರಬೇತಿದಾರ ಶ್ರೀಧರ್ ಲೋನಕರ, ಎನ್ ವಿ ಕುರವತ್ತಿಮಠ, ದ್ಯಾಮನಗೌಡ ಹುಲ್ಲೂರ, ಸೇರಿ ಪುರಸಭೆ ಸಿಬ್ಬಂದಿಗಳು, ಗಣತಿದಾರರು ಇದ್ದರು.

# ಆಸ್ತಿ ತೆರಿಗೆಗೆ ಶೇ.5 ರಷ್ಟು ರಿಯಾಯಿತಿ



**ತಾಳಿಕೋಟೆ:ಏ.5:** ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿನ ಆಸ್ತಿಗಳ ಮಾಲಿಕರು ಏಪ್ರೀಲ್ 30 ರೊಳಗೆ ಸ್ವಯಂ ಘೋಷಿತ ಆಸ್ತಿ ತೆರಿಗೆ ಭರಣಾ ಮಾಡಿದ್ದಲ್ಲಿ ಪುರಸಭೆ ವತಿಯಿಂದ ಶೇ.5 ರಷ್ಟು ರಿಯಾಯಿತಿ ಸೌಲಭ್ಯ ನೀಡಲಾಗಿದೆ ಎಂದರು ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ ಅವರು ತಿಳಿಸಿದ್ದಾರೆ.

2026-27ನೇ ಸಾಲಿನ ವರ್ಷಾರಂಭವಾಗಿದ್ದು ಆಸ್ತಿ ತೆರಿಗೆ ಮಾಲಿಕರಿಗೆ ಅನುಕೂಲವಾಗಲೆಂಬ ಉದ್ದೇಶದಿಂದ ಈ ರೀಯಾಯಿತಿ ನೀಡಲಾಗಿದ್ದು ಹಾಗೂ ಮೇ ಮತ್ತು ಜೂನ್ 2026ರ ಒಳಗೆ ಆಸ್ತಿ ತೆರಿಗೆಯನ್ನು ತುಂಬಿದಲ್ಲಿ ಆಸ್ತಿ ತೆರಿಗೆಯ ಮೇಲೆಯೂ ಬಡ್ಡಿ ಇರುವದಿಲ್ಲಾ ಜೂಲೈ 1 ರಿಂದ ಆಸ್ತಿ ತೆರಿಗೆ ತುಂಬಿದಲ್ಲಿ ಶೇ.100ಕ್ಕೆ ಒಂದು ತಿಂಗಳಿಗೆ 2 ರೂ.ಯಂತೆ ಬಡ್ಡಿ ಆಕರಣೆ ಮಾಡಲಾಗುವದು. ಹಾಗೂ ತಪ್ಪು ಮಾಹಿತಿ ನೀಡಿ ಕಂದಾಯ ತುಂಬಿದ್ದು ಕಂಡು ಬಂದಲ್ಲಿ ಮರು ಲೆಕ್ಕಾಚಾರ ಮಾಡಿ ನೋಡಿದರೆ ಈ ಹಿಂದೆ ತುಂಬಿದ ಹಣ ಹೊರತುಪಡಿಸಿ ಉಳಿದ ಮೊತ್ತದ ಎರಡು ಪಟ್ಟು ಕಂದಾಯ ತುಂಬಬೇಕಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಕಾರಣ ಸಾರ್ವಜನಿಕರು ಸಾರ್ವಜನಿಕರು ಸ್ವಯಂ ಘೋಷಿತ ಆಸ್ತಿ ತೆರಿಗೆ ತುಂಬಲು ಪುರಸಭೆ ವತಿಯಿಂದ ನೀಡಲಾಗಿರುವ ರಿಯಾಯಿತಿಯ ಸೌಲಭ್ಯವನ್ನು ಪಡೆದುಕೊಳ್ಳಬೇಕೆಂದು ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ ಅವರು ತಿಳಿಸಿದ್ದಾರೆ.

# ಎನ್‌ಎಸ್‌ಎಸ್ ಎಂದರೆ ನಾನು ಸೇವೆಗೆ ಸದಾಸಿದ್ಧ



**ಕಲಬುರಗಿ : ಏ.5:** ಎನ್‌ಎಸ್‌ಎಸ್ ಎಂದರೆ ನಾನು ಸೇವೆಗೆ ಸದಾಸಿದ್ಧ ಎಂದರ್ಥವಾಗಿದೆ. ಶಿಬಿರದಲ್ಲಿ ಭಾಗವಹಿಸುವವರು ಸೇವೆಗೆ ಸದಾಸಿದ್ಧರಾಗಿರಬೇಕು ಎಂದು ವಿ.ಜಿ.ಮಹಿಳಾ ಮಹಾವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಮಹೇಶಕುಮಾರ ಗಂವ್ಹಾರ ಹೇಳಿದರು.

ನಗರದ ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಿಳಾ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಎ ಮತ್ತು ಬಿ ಘಟಕವು ಶನಿವಾರ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಎನ್‌ಎಸ್‌ಎಸ್ ವಿಶೇಷ ವಾರ್ಷಿಕ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಎನ್‌ಎಸ್‌ಎಸ್ ಪದಕ್ಕೆ ಹೊಸ ವ್ಯಾಖ್ಯಾನ ನೀಡಿದ ಅವರು ನಿಸ್ವಾರ್ಥ ಸೇವೆಗೆ ಮತ್ತೊಂದು ಹೆಸರು ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಶಿಬಿರದಲ್ಲಿ ಸಕ್ರೀಯವಾಗಿ ಭಾಗವಹಿಸಬೇಕು. "ನಾನು ಅಲ್ಲ, ನೀನು" ಎಂಬುದು ಎನ್‌ಎಸ್‌ಎಸ್ ನ ಧ್ಯೇಯವಾಕ್ಯ. ಶಿಬಿರವು ಕೇವಲ ಸ್ವಚ್ಛತೆ ಅಷ್ಟೇ ಅಲ್ಲ ಶಿಸ್ತು, ಸಂಯಮ, ಸಮಯಪ್ರಜ್ಞೆ, ನಾಯಕತ್ವ ಗುಣ, ರಾಷ್ಟ್ರಾಭಿಮಾನ ಮತ್ತು ಸ್ವಇಚ್ಛಾಶಕ್ತಿ, ಸೇವಾಧರಿತ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಾಗ ಮಾತ್ರ ಗಾಂಧಿಜಿಯವರ ಕನಸ್ಸು ಶಿಬಿರದ ಆಶಯ ಈಡೇರುತ್ತದೆ. ಶಿಬಿರಾರ್ಥಿಗಳು ತಮ್ಮನ್ನು ತಾವು ತೊಡಗಿಸಿಕೊಂಡು ಈ ಶಿಬಿರದ ಮೂಲಕ ಸರ್ವತೋಮುಖ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಆದರೆ ಇಂದಿನ ಯುವಜನತೆ ಜಂಕ್‌ಫುಡ್, ಫಾಸ್ಟಫುಡಗಳಿಗೆ ಮೊರೆ ಹೋಗಿರುವುದು, ನಿರಂತರ ಮೊಬೈಲ್ ಬಳಕೆಯಿಂದ ಸಮಯ ವ್ಯರ್ಥ ಮಾಡುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿದರು.

ಮಹಾವಿದ್ಯಾಲಯದ ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡಾ.ಪುಟ್ಟಮಣಿ ದೇವಿದಾಸ ಮಾತನಾಡಿ, ಗ್ರಾಮ ಸ್ವರಾಜ ಮಹಾತ್ಮ ಗಾಂಧಿಜಿಯವರ ಕನಸ್ಸಾಗಿತ್ತು. ಗ್ರಾಮಗಳು ಅಭಿವೃದ್ಧಿಗೊಳ್ಳಬೇಕು. ಶಿಬಿರದಲ್ಲಿ ಪ್ರತಿಯೊಬ್ಬ ಸ್ವಯಂಸೇವಕಿಯರು ಯಾವುದೇ ಭೇದ ಭಾವವಿಲ್ಲದೆ ಮೇಲು-ಕೀಳು ಎನ್ನದೆ ಎಲ್ಲರೂ ಸಮಾನರು. ಇದು ನಮಗಾಗಿ ಅಲ್ಲ , ನಿಮಗಾಗಿ ಆಗಿದೆ, ಇದರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಸೀಮಾ ಪಾಟೀಲ ಮಾತನಾಡಿ, ಈ ಕಾರ್ಯಕ್ರಮದಿಂದ ಆರೋಗ್ಯಯುತ ಭಾರತಕ್ಕೆ ಆರೋಗ್ಯಯುತ ಯುವಶಕ್ತಿ ಕುರಿತಾದ ವಿಷಯಗಳನ್ನು ಪ್ರತಿಯೊಬ್ಬ ಸ್ವಯಂ ಸೇವಕಿಯರು ತಿಳಿದುಕೊಳ್ಳಬೇಕು. ವಿದ್ಯಾರ್ಥಿಗಳು ಶಿಬಿರ ಲಾಭವನ್ನು ಪಡೆಯಬೇಕು. ಶಿಸ್ತು, ಶ್ರಮದಾನ, ಸೇವಾಮನೋಭಾವನೆ ರೂಢಿಸಿಕೊಳ್ಳಿ ಎಂದರು.

ಎನ್‌ಎಸ್‌ಎಸ್ ಅಧಿಕಾರಿ ಡಾ.ರಾಜಲಕ್ಷ್ಮೀ ಡಿ. ಸ್ವಾಗತ ಮತ್ತು ಪ್ರಾಸ್ತಾವಿಕ ಮಾತನಾಡಿದರೆ, ಕಲ್ಪನಾ ಡಿ.ಮಹೇಂದ್ರಕರ್ ಅತಿಥಿ ಪರಿಚಯ ಮಾಡಿದರು. ಎ ಮತ್ತು ಬಿ ಘಟಕಗಳ ಶಿಬಿರಾರ್ಥಿಗಳು ಹಾಜರಿದ್ದರು. ಕು.ಸಾಧನಾ ಪವಾರ ನಿರೂಪಿಸಿದರು, ಕು. ಲಕ್ಷ್ಮಿ ಎಚ್. ವಂದಿಸಿದರು. ಗೋದಾವರಿ ಗುಂಪಿನ ಶಿಬಿರಾರ್ಥಿಗಳು ಪ್ರಾರ್ಥಿಸಿದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಸೂರ್ಯನ ಪ್ರಖರತೆ ತಪ್ಪಿಸಿಕೊಳ್ಳಲು ಮುನ್ನೆಚ್ಚರಿಕೆ ಕ್ರಮ ವಹಿಸಿ: ಸಚಿವ ಪ್ರಿಯಾಂಕ್ ಖರ್ಗೆ

**ಕಲಬುರಗಿ,ಏ.5–**ಪ್ರಸ್ತುತ ಬಿಸಿಲು ಏರುತ್ತಿದ್ದು ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಹೀಟ್ ವೇವ್ ನಿಂದಾಗಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಆರೋಗ್ಯ ಕಾಪಾಡಿಕೊಳ್ಳುವಂತೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕರೆ ನೀಡಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದೊಂದಿಗೆ ಚರ್ಚಿಸಿರುವ ಅವರು ಈ ಕುರಿತು ಪತ್ರಿಕಾ ಹೇಳಿಕೆ ನೀಡಿ ಬಿಸಿಲಿನ ಬೇಗೆಯಿಂದ ಸಾರ್ವಜನಿಕರು ತಪ್ಪಿಸಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಂತೆ ಸಲಹೆ ನೀಡಿದ್ದಾರೆ.

ಪುಸ್ತತ ಹಾಗೂ ಮುಂಬರುವ ಬೇಸಿಗೆ ದಿನಗಳಲ್ಲಿ ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚಾಗುವ ಹಿನ್ನಲೆಯಲ್ಲಿ ಹೀಟ್ ವೇವ್ (ಶಾಖದ ಹೊಡೆತ) ಹೀಟ್ ವೇವ್ ಸ್ಟ್ರೋಕ್ ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಎಲ್ಲಾ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳುಲು ಈ ಕೆಳಕಂಡ ಸಲಹೆಗಳನ್ನು ನೀಡಲಾಗಿದೆ.

**ಸಾರ್ವಜನಿಕರ ಗಮನಕ್ಕೆ:** ಕೆಲವು ಮುನ್ನೆಚ್ಚರಿಕಾ ಕ್ರಮಗಳನ್ನು ಸಾರ್ವಜನಿಕರು ವಹಿಸಿಕೊಳ್ಳಬೇಕು ಎಂದಿರುವ ಪ್ರಿಯಾಂಕ್ ಖರ್ಗೆ, ಮದ್ಯಾಹ್ನ 12 ರಿಂದ ಸಂಜೆ 4 ಗಂಟೆಯವರೆಗೆ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸಿಕೊಳ್ಳಬೇಕು ಹಾಗೂ ಹೆಚ್ಚಾಗಿ ಬಾಯಾರಿಕೆ ಇಲ್ಲದಿದ್ದರೂ ಕೂಡಾ ಸಾಕಷ್ಟು ಪ್ರಮಾಣದಲ್ಲಿ ನೀರಿ ಸೇವಿಸಬೇಕು ಎಂದು ಅವರು ಹೇಳಿದ್ದಾರೆ.

ಸಾಧ್ಯವಾದಷ್ಟು ಹಗುರವಾದ ತೆಳ್ಳಗಿನ ಬಟ್ಟೆ ಧರಿಸಬೇಕು. ಬಿಸಿಲಿಗೆ ಹೋಗುವ ಅನಿವಾರ್ಯತೆ ಎದುರಾದರೆ ರಕ್ಷಣಾತ್ಮಕ ಕನ್ನಡಕ, ಛತ್ರಿ, ಟೋಪಿ, ಬೂಟುಗಳನ್ನು ಧರಿಸಬೇಕು.ದೇಹ ನಿರ್ಜಲೀಕರಣವಾಗದಂತೆ ನೋಡಿಕೊಳ್ಳಬೇಕು. ಟೀ– ಕಾಫಿ ವರ್ಜಿಸಿ ಸಮತೋಲನ ಆಹಾರ ಸೇವಿಸಬೇಕು.

ಔಖಖ, ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಕ್ಷಿ, ತೋರಣಿ (ಅಕ್ಕಿ ನೀರು), ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ದೇಹವನ್ನು ಮರು– ಜಲೀಕರಣ ಮಾಡಲು ಸಹಾಯ ಮಾಡುತ್ತದೆ ಎಂದು ಸಚಿವರು ಒತ್ತಿ ಹೇಳಿದ್ದಾರೆ.

ಸಾಧ್ಯವಾದಷ್ಟು ಹಗುರವಾದ, ತಿಳಿ ಬಣ್ಣದ, ಸಡಿಲವಾದ ಮತ್ತು ರಂಧ್ರವಿರುವ ಹತ್ತಿ ಬಟ್ಟೆಗಳನ್ನು ಧರಿಸಿ. ಬಿಸಿಲಿನಲ್ಲಿ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಛತ್ರಿ/ಟೋಪಿ, ಬೂಟುಗಳು ಅಥವಾ



ಚಪ್ಪಲ್ ಗಳನ್ನು ಬಳಸಿ. ಹೊರಗಿನ ತಾಪಮಾನ ಹೆಚ್ಚಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ. ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ.

ದೇಹವನ್ನು ನಿರ್ಜಲೀಕರಣಗೊಳಿಸುವ ಆಲೋಹಾಲ್, ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು ತಪ್ಪಿಸಿ. ಪ್ರಾಣಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಿ.

ನಿಮ್ಮ ಮನೆಯನ್ನು ತಂಪಾಗಿ ಇರಿಸಿ, ಪರದೆಗಳು, ಶಟರ್‌ಗಳು ಅಥವಾ ಸನ್‌ಶೇಡ್‌ಗಳನ್ನು ಬಳಸಿ ಮತ್ತು ರಾತ್ರಿಯಲ್ಲಿ ಕಿಟಕಿಗಳನ್ನು ತೆರೆಯಿರಿ.

ಫ್ಯಾನ್, ಒದ್ದೆ ಬಟ್ಟೆಗಳನ್ನು ಬಳಸಿ ಮತ್ತು ತಣ್ಣೀರಿನಲ್ಲಿ ಸ್ನಾನ ಮಾಡಿ.

**ಸನ್‌ಸ್ಟ್ರೋಕ್ ನಿಂದ ಪೀಡಿತ ವ್ಯಕ್ತಿಯ ಚಿಕಿತ್ಸೆಗಾಗಿ ಸಲಹೆಗಳು:** ವ್ಯಕ್ತಿಯನ್ನು ತಂಪಾದ ಸ್ಥಳದಲ್ಲಿ ನೆರಳಿನ ಕಳಗೆ ಇರಿಸಿ. ಅವರನ್ನು ಒದ್ದೆ ಬಟ್ಟೆಯಿಂದ ಒರೆಸಿ/ಆಗಾಗ ದೇಹವನ್ನು ತೊಳೆಯಿರಿ. ತಲೆಯ ಮೇಲೆ ಸಾಮಾನ್ಯ ತಾಪಮಾನದ ನೀರನ್ನು ಸುರಿಯಿರಿ. ದೇಹದ ಉಷ್ಣತೆಯನ್ನು ಕಡಿಮೆ ಮಾಡುವುದು ಮುಖ್ಯ ವಿಷಯ. ವ್ಯಕ್ತಿಗೆ ಓಆರ್‌ಎಸ್ ಕುಡಿಯಲು ಅಥವಾ ನಿಂಬೆ ಸರಬತ್/ತೋರಣಿ ಅಥವಾ ದೇಹವನ್ನು ಪುನರ್ಜಲೀಕರಣಗೊಳಿಸಲು ಉಪಯುಕ್ತವಾದ ಯಾವುದನ್ನಾದರೂ ನೀಡಿ.

ತಕ್ಷಣ ವ್ಯಕ್ತಿಯನ್ನು ಹತ್ತಿರದ ಆರೋಗ್ಯ ಕೇಂದ್ರಕ್ಕೆ ಕರೆದುಕೊಂಡು ಹೋಗಿ. ರೋಗಿಗೆ ತಕ್ಷಣ ಆಸ್ಪತ್ರೆಗೆ ದಾಖಲಿಸುವ ಅಗತ್ಯವಿರುತ್ತದೆ, ಏಕೆಂದರೆ ಶಾಖದ ಹೊಡೆತಗಳು ಮಾರಣಾಂತಿಕವಾಗಬಹುದು. ಸಾರ್ವಜನಿಕರು ತಂಪಾದ ವಾತಾವರಣದಿಂದ ಬಿಸಿ ವಾತಾವರಣಕ್ಕೆ ಬಂದವರ ದೇಹವು ಶಾಖಕ್ಕೆ ಒಗ್ಗಿಕೊಳ್ಳುವವರೆಗೆ ಅವರು ಒಂದು ವಾರದವರೆಗೆ ತೆರೆದ ಮೈದಾನದಲ್ಲಿ ಚಲಿಸಬಾರದು ಮತ್ತು ಸಾಕಷ್ಟು ನೀರು ಕುಡಿಯಬೇಕು. ಶಾಖ ತರಂಗದ ಸಮಯದಲ್ಲಿ ಬಿಸಿ ವಾತಾವರಣಕ್ಕೆ ಕ್ರಮೇಣ ಒಡ್ಡಿಕೊಳ್ಳುವುದರಿಂದ ಒಗ್ಗಿಕೊಳ್ಳುವಿಕೆಯನ್ನು ಸಾಧಿಸಲಾಗುತ್ತದೆ.

ರೈತರು/ಕೃಷಿ ಕಾರ್ಮಿಕರು.

ನೀವು ಹೊಲದಲ್ಲಿ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿ ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಬಳಸಿ.

ಪ್ರಯಾಣಿಕರಿಗೆ.ಪುಯಾಣಿಸುವಾಗ, ನಿಮ್ಮೊಂದಿಗೆ ನೀರನ್ನು ಒಯ್ದಿರಿ.

ಬಿಸಿಗಾಳಿ ಪರಿಸ್ಥಿತಿಗಳಿಗೆ ಸಲಹೆ ಸಾಧಾರಣ ತಾಪಮಾನ ಮತ್ತು ಶಾಖವು ಸಾಮಾನ್ಯ ಜನರಿಗೆ ಸಹಿಸಿಕೊಳ್ಳಬಲ್ಲದು. ಆದರೆ ದುರ್ಬಲ ಜನರಿಗೆ ಮತ್ತು ಮಧ್ಯಮ ಆರೋಗ್ಯ ಕಾಳಜಿ ಇವರು ಜನರು (ಉದಾ. ಶಿಶುಗಳು, ವೃದ್ಧರು, ದೀರ್ಘಕಾಲದ ಕಾಯಿಲೆ ಇರುವ ಜನರು ಸಹಿಸಿಕೊಳ್ಳಲಾಗದು.)

ಬಿಸಿಲಿನಲ್ಲಿ ತಲೆ ಹಾಗೂ ದೇಹವನ್ನು ಸೂರ್ಯನ ಕಿರಣಗಳಿಗೆ ಒಡ್ಡದಿರಿ ಹಗುರವಾದ, ತಿಳಿ ಬಣ್ಣದ, ಸಡಿಲವಾದ, ಹತ್ತಿ ಬಟ್ಟೆಗಳನ್ನು ಧರಿಸಿ, ಟೋಪಿ ಅಥವಾ ಕೊಡೆ/ಛತ್ರಿ ಬಳಸಿ.

ಒಂದು ವೇಳೆ ಹೊರಗೆ ಬಿಸಿಲಿನಿಂದ ಮನೆಗೆ ಬಂದ ತಕ್ಷಣ ಕೂಡಲೇ ಅತಿ ತಂಪಾದ ನೀರು ಕುಡಿಯಬಾರದು ಅಥವಾ ಎ.ಸಿ /ಕೋಲರ್ ಗಳನ್ನು ಕೋಡಲೇ ಬಳಸುವುದು ಸೂಕ್ತವಲ್ಲ.

**ಜಾನುವಾರುಗಳ ರಕ್ಷಣೆ:–** ಜಾನುವಾರುಗಳನ್ನು ಮುಂಜಾನೆ ಮತ್ತು ಸಾಯಂಕಾಲ ಸಮಯದಲ್ಲಿ ಮೇಯಿಸಲು ಬಿಡಬೇಕು.ದಿನಕ್ಕೆ 2 ರಿಂದ 3 ಸಾರಿ ಶುದ್ಧವಾದ ನೀರನ್ನು ಕುಡಿಸಬೇಕು.

ಮಧ್ಯಾಹ್ನದ ಸಮಯದಲ್ಲಿ ಜಾನುವಾರುಗಳನ್ನು ಹಾಗೂ ಕುರಿ ಮತ್ತು ಆಡುಗಳನ್ನು ಕೊಟ್ಟಿಗೆಯಲ್ಲಿ ಅಥವಾ ಗಿಡದ ನೆರಳಿನಲ್ಲಿ ಕಟ್ಟಬೇಕು.

ಜಮೀನು ಉಳಿಮೆ ಮಾಡಲು ಎತ್ತುಗಳನ್ನು ಮಂಜಾನೆ ಅಥವಾ ಸಾಯಂಕಾಲದ ಸಮಯದಲ್ಲಿ ಮಾತ್ರ ಕೆಲಸಕ್ಕೆ ಉಪಯೋಗಿಸಬೇಕು.

ನಿರ್ಜಲೀಕರಣಗೊಂಡ ಜಾನುವಾರುಗಳಿಗೆ ಉಪ್ಪು, ಅಡುಗೆ ಸೋಡಾ, ಬೆಲ್ಲ ಹಾಗೂ ಲಿಂಬೆಹಣ್ಣಿನ ರಸವನ್ನು ನೀರಿನಲ್ಲಿ ಮಿಶ್ರಣ ಮಾಡಿ ದಿನದಲ್ಲಿ 3 ರಿಂದ 4 ಸಾರಿ ಕುಡಿಸಬೇಕು.

ಜಾನುವಾರುಗಳಿಗೆ ಮುಂಜಾಗ್ರತೆಯಾಗಿ ಇಲಾಖೆಯಿಂದ ಉಚಿತವಾಗಿ ನೀಡುವ ಸಾಂಕ್ರಾಮಿಕ ರೋಗಗಳಿಗೆ ಲಸಿಕೆಗಳನ್ನು ಕಾಲಕಾಲಕ್ಕೆ ನಿಗದಿತ ಸಮಯದಲ್ಲಿ ಹಾಕಿಸಬೇಕು.

ರೈತರು ತಮ್ಮ ಜಮೀನಿನಲ್ಲಿರುವ ಮೇವನ್ನು ಯಾವುದೇ ಕಾರಣಕ್ಕೂ ಸುಟ್ಟು ಹಾಕದೇ ಬಣವೇ ಹಾಕಿ ಅಥವಾ ಸುರುಳಿ ಸುತ್ತಿಟ್ಟುಕೊಂಡು (ಬೇಲಿಂಗ್) ಮೇವುನ್ನು ಸಂಗ್ರಹಿಸಬೇಕು. ಇದರಿಂದ ಭೂಮಿಯು ಫಲವತ್ತತೆ ಹಾಳಾಗದಂತೆ ತಡೆಯಬಹುದು ಜೊತೆಗೆ ವಾಯುಮಾಲಿನ್ಯ ನಿಯಂತ್ರಣ ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯನ್ನು ನೀಗಿಸಬಹುದು.

ಬಿಸಿಗಾಳಿ ಸಂದರ್ಭಗಳಲ್ಲಿ ಸಮುದಾಯ ಮಟ್ಟದಲ್ಲಿ ಅನುಸರಿಸಬೇಕಾದ ಹಾಗೂ ಅನುಸರಿಸಬಾರದ ಕ್ರಮಗಳ ಪಟ್ಟಿಯನ್ನು ಕೂಡಾ ಈ ಕೆಳಗಿನಂತೆ ಹೇಳಲಾಗಿದೆ.

***ಅನುಸರಿಸಬೇಕಾದ ಕ್ರಮಗಳು:** ಸಾಧ್ಯವಾದಷ್ಟು ತಂಪಾದ ಸ್ಥಳಗಳ ಇರಿ.ಬಿಸಿಲಿನ ಅವಧಿಯಲ್ಲಿ ಕೊಡೆ ಇಲ್ಲದೆ ಹೊರಗೆ ಹೋಗಬೇಡಿ. ಸಾಧ್ಯವಾದಷ್ಟು ಹತ್ತಿಯ ಉಡುಪುಗಳನ್ನು ಧರಿಸಿ.ಬಿಸಿಲಿನ ಅವಧಿಯಲ್ಲಿ ಕೊಡೆಗಳನ್ನು ಬಳಸಿ.ಹತ್ತಿಯ ಟೋಪಿಗಳನ್ನು ಬಳಸಿ.ಹೆಚ್ಚಿನ ಬಿಸಿಲು ಅವಧಿಯಲ್ಲಿ ವಿಶ್ರಾಂತಿ ಪಡೆಯಿರಿ.ಸಾಕಷ್ಟು ನೀರು, ಮಜ್ಜಿಗೆ ಕುಡಿಯಿರಿ.ವಾಸವಿರುವ ಕೋಣೆಯನ್ನು ತಂಪಾಗಿರಿಸಿ.ವಾಸವಿರುವ ಕೋಣೆಯಲ್ಲಿ ನೇರವಾಗಿ ಬಿಸಿಲು ಬೀಳುವುದನ್ನು ತಪ್ಪಿಸಿ. ಬಿಸಿಗಾಳಿಗೆ ತುತ್ತಾದ ವ್ಯಕ್ತಿಯನ್ನು ಕೂಡಲೇ ತಂಪಾದ ಸ್ಥಳಕ್ಕೆ ರವಾನಿಸಿ ಕೂಡಲೇ ಚಿಕಿತ್ಸೆ ನೀಡಿ.ಬಿಸಿಗಾಳಿ ತುತ್ತಾದವರಿಗೆ ಸಾಕಷ್ಟು ಕುಡಿಯುವ ನೀರು, ಮಜ್ಜಿಗೆ, ದ್ರವಹಾರ ನೀಡಿ.

**ಅನುಸರಿಸಬಾರದ ಕ್ರಮಗಳು:** ನೇರ ಬಿಸಿಲು/ಬಿಸಿಗಾಳಿಗೆ ಒಡ್ಡಿಕೊಳ್ಳಬೇಡಿ.

ಕಪ್ಪು /ಗಾಢ ಬಣ್ಣದ ಹಾಗೂ ಸಿಂಥಟಿಕ್ ಉಡುಪುಗಳನ್ನು ಧರಿಸಬೇಡಿ.ನೇರವಾಗಿ ಬಿಸಿಲಿನ ಝಳಕ್ಕೆ ತಲೆ ಒಡ್ಡಬೇಡಿ.ಹೆಚ್ಚಿನ ಬಿಸಿಲು ಇರುವ ಅವಧಿಯಲ್ಲಿ ಶ್ರಮದಾಯಕ ದೈಹಿಕ ಕೆಲಸಗಳನ್ನು ಮಾಡಬೇಡಿ.ಬಿಸಿ ಚಹ, ಮದ್ಯ ಸೇವಿಸಬೇಡಿ ಬಿಸಿಗಾಳಿಗೆ ತುತ್ತಾದ ವ್ಯಕ್ತಿಯನ್ನು ಕೂಡಲೇ ತಂಪಾದ ಸ್ಥಳಕ್ಕೆ ರವಾನಿಸಲು ತಡಮಾಡಬೇಡಿ.ಬಿಸಿಗಾಳಿ ತುತ್ತಾದ ವ್ಯಕ್ತಿಗೆ ಪ್ರಥಮ ಚಿಕಿತ್ಸೆ ನೀಡುವುದನ್ನು ತಡಮಾಡಬೇಡಿ. ಬಿಸಿಗಾಳಿ ಸಂದರ್ಭಗಳಲ್ಲಿ ಚಹಾ, ಕಾಫಿ ಸೇವಿಸಬೇಡಿ.

# ಡಾ. ಅಂಬೇಡ್ಕರ್ ವ್ಯಕ್ತಿತ್ವ ವಿಶ್ವಕ್ಕೆ ಮಾದರಿ: ಶರಣಪ್ಪ ಡಿ




**ಕಲಬುರಗಿ:ಏ.5:** ದೇಶದ ಜನರಿಗೆ ಪ್ರಜಾಪ್ರಭುತ್ವದ ಮೌಲ್ಯಗಳನ್ನು ತೋರಿಸಿದ ಬಾಬಾ ಸಾಹೇಬ್ ಡಾ. ಅಂಬೇಡ್ಕರ್ ವ್ಯಕ್ತಿತ್ವ ಮಾದರಿಯಾಗಿದೆ. ಇಂತಹ ಮಹಾನ್ ಪುರುಷರ ಜಯಂತಿ ಅಂಗವಾಗಿ ಏರ್ಪಡಿಸಿದ್ದ ಕ್ರೀಡಾಕೂಟ ಯಶಸ್ವಿಯಾಗಲಿ ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಡಿ ಹೇಳಿದರು.

ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ರವರ 135 ಜಯಂತ್ಯೋತ್ಸವದ ನಿಮಿತ್ಯ ಶನಿವಾರ ಎಮ್.ಎಸ್.ಕೆ.ಮಿಲ್ ಮೈದಾನ, ದೀಕ್ಷಾ ಭೂಮಿ, ಕಣ್ಣಿ ಮಾರ್ಕೆಟ್ ದಲ್ಲಿ ಏರ್ಪಡಿಸಿದ್ದ ಜೈಭೀಮ್ ಕ್ರಿಕೆಟ್ ಟ್ರೋಫಿ ಸಿಜನ್ –2 ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಸೋಲು–ಗೆಲುವು ಸಾಮಾನ್ಯ. ಕ್ರೀಡೆಯಿಂದ ದೈಹಿಕ ಮತ್ತು ಮಾನಸಿಕವಾಗಿ ಸದೃಢರಾಗಬಹುದು. ಮಹಾನ್ ನಾಯಕರ ಸ್ಮರಣಾರ್ಥ ಪಂದ್ಯಾವಳಿ ನಡೆಸುತ್ತಿರುವುದು ಸಂತಸದ ವಿಷಯ ಎಂದರು. ನಂತರ ಮಾತನಾಡಿದ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಕ್ರೀಡಾಕೂಟ ಏರ್ಪಡಿಸುವುದರ ಮೂಲಕ ಸ್ಪರ್ಧಾ ಮನೋಭಾವ ಬೆಳೆಸಲಾಗುತ್ತಿದೆ. ಗೆಲ್ಲುವುದಕ್ಕಿಂತ ಭಾಗವಹಿಸುವ ಮನೋಭಾವ ಬೆಳೆಯಲಿ. ಪ್ರತಿಯೊಬ್ಬ ಆಟಗಾರರು ತೀರ್ಪುಗಾರರ ನಿರ್ಣಯಕ್ಕೆ ಬದ್ಧರಾಗಿರಬೇಕು. ಇಂತಹ ಉತ್ತಮ ಪಂದ್ಯಾವಳಿ ಏರ್ಪಡಿಸಿದ ಎಲ್ಲರಿಗೂ ಧನ್ಯವಾದ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಮಹಾಪೌರರಾದ ವಿಶಾಲ್ ಧರ್ಗಿ, ಮಹಾನಗರ ಪಾಲಿಕೆ ಸದಸ್ಯ ವಿಶಾಲ್ ನವರಂಗ್ 135ನೇ ಜಿಲ್ಲಾ ಜಯಂತೋತ್ಸವ ಸಮಿತಿ ಅಧ್ಯಕ್ಷ ಅಶೋಕ ವೀರನಾಯಕ, ಪ್ರಚಾರ ಸಮಿತಿ ಅಧ್ಯಕ್ಷ ಡಾ. ಅರುಣಕುಮಾರ ಕುರನೆ, ರಾಜೀವ್ ಜಾನೆ, ಮಲ್ಲಪ್ಪ ಹೊಸ್ಮನಿ, ದೇವಾ ಸಿನ್ನೂರಕರ, ಸಂತೋಷ್ ಹಾದಿಮನಿ, ಸುರೇಶ ಹಾದಿಮನಿ, ದಿಗಂಬರ ಬೆಳಮಗಿ, ಗಣೇಶ ಒಳಕೇರಿ, ಎಸ್. ಎಸ್ ತಾವಡೆ,ದಿನೇಶ್ ದೊಡ್ಡಮನಿ, ಡಾ. ಜಗನಾಥ ಪಟ್ಟಣಕರ, ನಿಜಲಿಂಗ ದೊಡ್ಮನಿ, ಜೈಭೀಮ್ ಕ್ರಿಕೆಟ್ ಟೂರ್ನಮೆಂಟ್ ಸಮಿತಿ ಅಧ್ಯಕ್ಷ ಚಂದ್ರಕಾಂತ ಶಿರೋಳೆ, ಪ್ರಧಾನ ಕಾರ್ಯದರ್ಶಿ ಸಿದ್ದಾರೂಢ ಖಜೂರಿ, ಉಪಾಧ್ಯಕ್ಷ ಡಾ. ಅಶೋಕ ದೊಡ್ಡಮನಿ ಸೇರಿದಂತೆ ಅನೇಕರು ಇದ್ದರು.

ತಂಡದಲ್ಲಿ ಒಟ್ಟು 8 ತಂಡಗಳು ಭಾಗವಹಿಸಿದ್ದು ಎಪ್ರೀಲ್ 12ರವರೆಗೆ ಐಪಿಎಲ್ ಮಾದರಿಯಲ್ಲಿ ಪಂದ್ಯಾವಳಿಗಳು ನಡೆಯಲಿವೆ. ವಿಜೇತ ತಂಡಕ್ಕೆ 1.50 ಲಕ್ಷಗಳು, ರನ್ನರ್ ಆಫ್ ಗೆ 75 ಸಾವಿರ ರೂ ಇದಲ್ಲದೆ ಮ್ಯಾನ್ ಆಫ್ ದಿ ಮ್ಯಾಚ್, ಮ್ಯಾನ್ ಆಫ್ ದಿ ಸೀರಿಜ್, ಉತ್ತಮ ಬ್ಯಾಟ್ಸಮ್ಯಾನ್, ಉತ್ತಮ ಬೌಲರ್ ಸೇರಿದಂತೆ ಅನೇಕ ಬಹುಮಾನಗಳು ಕೊಡಲಾಗುತ್ತಿದೆ.

# ಉಚಿತ ಸಾಮೂಹಿಕ ವಿವಾಹ ನೋಂದಣಿ ಪ್ರಾರಂಭ

**ಜೇವರಗಿ,ಏ 5:**ಡಾ. ಬಿ.ಆರ್ ಅಂಬೇಡ್ಕರ್ ಅವರ ಜಯಂತಿ ನಿಮಿತ್ಯ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಲಕ್ಷ್ಮಿನಾರಾಯಣ್ ನಾಗವರ್ ಸ್ಥಾಪಿತ ಸಂಘಟನೆ ವತಿಯಿಂದ ಬರುವ ಮೇ 15ರಂದು ಶಹಪುರ ತಾಲೂಕಿನ ಭೀಮರಾಯನಗುಡಿ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಉಚಿತ ಸಾಮೂಹಿಕ ವಿವಾಹ ನಡೆಯಲಿದೆ. ಆದ್ದರಿಂದ ಜೇವರ್ಗಿ ಮತ್ತು ಯಡ್ರಾಮಿ ತಾಲೂಕಿನ ದಲಿತ ಬಂಧುಗಳು ಉಚಿತವಾಗಿ ನೋಂದಾಯಿಸಿಕೊಳ್ಳಲು ತಾಲೂಕ ಸಂಚಾಲಕ ವಿಶ್ವರಾಧ್ಯ ಮಾಯರ್ ಗಂವಾರ ತಿಳಿಸಿದ್ದಾರೆ.

ರಾಜ್ಯ ಸಮಿತಿ ಮುಖಂಡ ಹೊನ್ನಪ್ಪ ಗಂಗನಾಳ,ವಿಭಾಗೀಯ ಸಂಚಾಲಕ ಮಾಹದೇವ ಕೊಳಕೂರು ಮಾತನಾಡಿ ನವ ವಧು–ವರರು ಶಾಲೆಯ ದಾಖಲೆ ಆಧಾರ್ ಕಾರ್ಡು ರೇಷನ್ ಕಾರ್ಡ್ ಅಥವಾ ಗುರುತಿನ ಚೀಟಿ ಡಾಕ್ಟರ್ ಸರ್ಟಿಫಿಕೇಟ್ ಕಡ್ಡಾಯವಾಗಿ ನೋಂದಣಿ ಮಾಡಲು ತರಬೇಕು ಜೇವರ್ಗಿ ತಾಲೂಕು ಸಂಚಾಲಕ ವಿಶ್ವರಾಧ್ಯ ಗಂವಾ9945832519 ಮತ್ತು ಯಡ್ರಾಮಿ ತಾಲೂಕ ಸಂಚಾಲಕ ಸಂಗಮೇಶ್ ವಡಿಗೇರಿ ಮಾದೇವ ಕೋಳಕೂರು 8150909228 ಅವರಿಗೆ ಸಂಪರ್ಕಿಸಲು



ಕೋರೊದರು. ಈ ಸಂದರ್ಭದಲ್ಲಿ ಶಿವಶರಣಪ್ಪ ಯಾಳಗಿ, ಶರಣಪ್ಪ ಭೂತಾಳಿ, ಮರಿಯಪ್ಪ ಸಲದಪೂರ, ಭೀಮರಾಯ ಜಗ್ರಿ, ರಾಯಪ್ಪ ಬಾರಿಗಿಡ,ಶರಣಪ್ಪ ಡೀಲರ್ ಮರೆಪ್ಪ ಬೇಗಾರ್, ರಾಜಶೇಖರ್ ಶಿಲ್ಪಿ ಸಂಗಣ್ಣ ಗುಡೂರ್ ಗುರುಲಿಂಗಪ್ಪ ಗುಡೂರು ಸೇರಿದಂತೆ ಅನೇಕರಿದ್ದರು

# ತಹಶಿಲ್ದಾರ ಕಛೇರಿಯಲ್ಲಿ ಡಾ: ಬಾಬು ಜಗಜೀವನ ರಾಮ್ ಜಯಂತಿ ಆಚರಣೆ



**ಲಿಂಗಸುಗೂರು:** ಪಟ್ಟಣದ ತಹಶೀಲ್ದಾರರ ಕಚೇರಿಯಲ್ಲಿ ಡಾ. ಬಾಬು ಜಗಜೀವನ್ ರಾಮ್ ಜಯಂತಿಯನ್ನು ಗೌರವಭಾವದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ತಹಶೀಲ್ದಾರರಾದ ಸತ್ಯಮ್ಮ ಅವರು ಡಾ. ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಅವರ ಸಮಾಜಸೇವೆಯ ಮಹತ್ವವನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಉಪತಹಶೀಲ್ದಾರ ಬಸವರಾಜ ಝಳಕಿಮಠ, ಅಮರೇಶ, ಶಿವಕುಮಾರ್, ಮಂಜು, ಕಿರಣಕುಮಾರ, ಹನುಮಂತ ಸೇರಿದಂತೆ ಕಚೇರಿ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು,

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE